# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 06 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 16–07–2024 ಮಂಗಳವಾರ | ಪುಟ: 4 | ಬೆಲೆ : ರೂ.2–00
Volume - 02 Issue - 06 | Title- Code: KARKAN 28269 | Chitradurga | Date: 16-07-2024 Tuesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಡಿವೈಡರ್‌ಗೆ ಕಾರು ಡಿಕ್ಕಿ: ಸ್ಥಳದಲ್ಲೇ ದಂಪತಿ ಸಾವು 2

ಪದವಿ ಜೊತೆ ಕೌಶಾಲ್ಯಾಧಾರಿತ ಶಿಕ್ಷಣ ಕಲಿಯುವಂತೆ ವಿದ್ಯಾರ್ಥಿಗಳಿಗೆ ಕರೆ 3

ಶಕುನಿ ಪಾತ್ರಕ್ಕೆ ಜೀವ ತುಂಬಿದ ಕಲಾವಿದ ಎಂ.ನಾಗರಾಜು 4



ಸುದ್ದಿ, ಜಾಹಿರಾತಿಗೆ
9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

ಕೌಶಲ್ಯ ಮಿಷನ್ ಪ್ರಗತಿ ಪರಿಶೀಲನೆ ಸಭೆಯಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ

# ಪಿಎಂ ಸ್ವನಿಧಿ ಯೋಜನೆ ಲಾಭಗಳ ಕುರಿತು ಫಲಾನುಭವಿಗಳಿಗೆ ಅರಿವು ಮೂಡಿಸಿ

» ಚಿತ್ರದುರ್ಗ

ಪಿ.ಎಂ.ಸ್ವನಿಧಿ ಯೋಜನೆಯ ಲಾಭಗಳ ಕುರಿತು ಫಲಾನುಭವಿಗಳಿಗೆ ಅರಿವು ಮೂಡಿಸುವ ಕಾರ್ಯ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸೋಮವಾರ ಜರುಗಿದ ಜಿಲ್ಲಾ ಕೌಶಲ್ಯ ಮಿಷನ್ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಬೀದಿ ಬದಿ ವ್ಯಾಪಾರಸ್ಥರಿಗಾಗಿಯೇ ಪಿ.ಎಂ. ಸ್ವನಿಧಿ ಕಿರು ಸಾಲ ಸೌಲಭ್ಯ ಯೋಜನೆ ಜಾರಿ ಮಾಡಲಾಗಿದೆ. ಯೋಜನೆಯಡಿ ಮೂರು ಹಂತಗಳಲ್ಲಿ ಬೀದಿ ವ್ಯಾಪಾರಿಗಳಿಗೆ ಸಾಲ ನೀಡಲಾಗುತ್ತಿದೆ. ಆದರೆ ಮೊದಲ ಹಂತದಲ್ಲಿ ರೂ.10,000/– ಸಾಲ ಪಡೆದವರು, ಸಾಲ ಮರುಪಾವತಿ ಮಾಡದೇ, ಎರಡು ಹಾಗೂ ಮೂರನೇ ಹಂತದ ಸಾಲ ಪಡೆಯಲು ಅನರ್ಹರಾಗುತ್ತಿದ್ದಾರೆ. ಹೀಗಾಗಿ ಮೊದಲ ಹಂತದಲ್ಲಿ ಸಾಲ ಪಡೆದವರು, ಕಾಲಕ್ಕೆ ಸರಿಯಾಗಿ ಮರುಪಾವತಿಸಿದಲ್ಲಿ, ಅಂತಹವರಿಗೆ ಎರಡು ಹಾಗೂ ಮೂರನೆ ಹಂತದಲ್ಲಿ ನೀಡಲಾಗುವ ಸಾಲಕ್ಕೆ ಸಂಬಂಧಿಸಿದಂತೆ ಫಲಾನುಭವಿಗಳಿಗೆ ಸಮರ್ಪಕವಾಗಿ ಅರಿವು ಮೂಡಿಸಬೇಕು ಎಂದರು. ಪ್ರಧಾನ ಮಂತ್ರಿ ಬೀದಿ ವ್ಯಾಪಾರಿಗಳ ಆತ್ಮನಿರ್ಭರ್ ಯೋಜನೆಯಡಿ ಪಿ.ಎಂ. ಸ್ವನಿಧಿ ಸಾಲ ಪಡೆದ ಫಲಾನುಭವಿಗಳ ಕುಟುಂಬಗಳ ಸಾಮಾಜಿಕ ಹಾಗೂ ಆರ್ಥಿಕ ಸಮೀಕ್ಷೆ ಕೈಗೊಳ್ಳಲಾಗುತ್ತಿದೆ. ಈ ಕುಟುಂಬಗಳಿಗೆ ಸ್ವನಿಧಿ ಸಮೃದ್ಧ್ ಯೋಜನೆಯಡಿ, ಪ್ರಧಾನ ಮಂತ್ರಿ ಸುರಕ್ಷಾ ಬೀಮಾ, ಜೀವನ್ ಜ್ಯೋತಿ ಬೀಮಾ, ಶ್ರಮಯೋಗಿ ಮನ್ ಧನ್ ಯೋಜನೆ, ಒನ್ ನೇಷನ್ ಒನ್ ರೇಷನ್ ಕಾರ್ಡ್, ಜನಧನ್, ಜನನಿ ಸುರಕ್ಷಾ, ಮಾತೃ ವಂದನಾ ಹಾಗೂ ಲೇಬರ್ ಕಾರ್ಡ್ ಹಣಕಾಸು ಸೌಲಭ್ಯಗಳನ್ನು ನೀಡಲಾಗುವುದು. ಆದರೆ ಬೀದಿ ವ್ಯಾಪಾರಿಗಳಿಗೆ ಈ ಎಲ್ಲ ಯೋಜನೆಗಳ ಕುರಿತು ಮಾಹಿತಿ ಇಲ್ಲ. ಸಾಲ ಪಡೆದವರು ಸಾಲವನ್ನು ಮರುಪಾತಿ ಮಾಡಿ, ಮುಂದಿನ ಹಂತಗಳ ಸಾಲ ಪಡೆದರೆ ಸರ್ಕಾರದಿಂದ ಇನ್ನೂ ಹೆಚ್ಚಿನ ಲಾಭ ದೊರಕಲಿದೆ ಎಂಬುದನ್ನು ಮನವರಿಕೆ ಮಾಡಿ ಕೊಡಬೇಕು. ಈ ಕುರಿತು ಜಾಗೃತಿ ಹಾಗೂ ಮಾಹಿತಿ ಶಿಕ್ಷಣ ಸಂವಹನ ಕಾರ್ಯಕ್ರಮಗಳನ್ನು ಜಿಲ್ಲೆಯಾದ್ಯಂತ ಹಮ್ಮಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು.

**ಪಿ.ಎಂ.ವಿಶ್ವಕರ್ಮ ಯೋಜನೆ ತರಬೇತಿ ಕುರಿತು ಮಾಹಿತಿ ಸಂಗ್ರಹಿಸಿ:** ಪಿ.ಎಂ.ವಿಶ್ವಕರ್ಮ ಯೋಜನೆಯಡಿ ಜಿಲ್ಲೆಯಲ್ಲಿ ನೊಂದಣಿಯಾದವರ ವೈಯಕ್ತಿಕ ವಿವರ, ಇದುವರೆಗೂ ತರಬೇತಿ ಪಡೆದವರ ಸಂಖ್ಯೆ ಎಷ್ಟು? ಜಿಲ್ಲೆಯ ಯಾವ ಯಾವ ಕೇಂದ್ರಗಳಲ್ಲಿ ತರಬೇತಿ ನೀಡಲಾಗುತ್ತಿದೆ ಎಂಬುದರ ಸಂಪೂರ್ಣ ಮಾಹಿತಿಯನ್ನು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಚೇರಿಯಿಂದ ಸಂಗ್ರಹಿಸಬೇಕು. ಕೇವಲ ದಾಖಲೆಗಳಲ್ಲಿ ತರಬೇತಿ ನೀಡಿದರೆ ಪ್ರಯೋಜನಕ್ಕೆ ಬರುವುದಿಲ್ಲ. ತರಬೇತಿ ನೀಡುವ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿ ಒಟ್ಟು 26,366 ಜನರು 18 ಬಗೆಯ ವಿವಿಧ ವೃತ್ತಿಗಳ ತರಬೇತಿ ಪಡೆಯಲು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿದ್ದಾರೆ. ಇದರಲ್ಲಿ 11,899 ಜನರಿಗೆ ಈಗಾಗಲೆ ತರಬೇತಿ ನೀಡಲಾಗಿದೆ. 14,467 ಜನರಿಗೆ ತರಬೇತಿ ನೀಡುವುದು ಬಾಕಿಯಿದೆ ಎಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ವೇಮಣ್ಣ.ಟಿ ಮಾಹಿತಿ ನೀಡಿದರು.

ಕಲಿಕೆ ಜೊತೆ ಕೌಶಲ್ಯ ಯೋಜನೆಯಡಿ ಜಿಲ್ಲೆಯ 09 ಪ್ರಥಮ ದರ್ಜೆ ಕಾಲೇಜುಗಳಲ್ಲಿ 6 ಸೆಮಿಸ್ಟರ್ ವಿದ್ಯಾರ್ಥಿಗಳಿಗೆ ವಿವಿಧ ವೃತ್ತಿ ತರಬೇತಿಗಳನ್ನು ನೀಡಲಾಗುತ್ತಿದೆ. ಡಿಜಿಟಲ್ ಮಾರ್ಕೆಟಿಂಗ್, ಅನಿಮೇಷನ್, ಕಂಟೆಂಟ್ & ಕಮ್ಯುನಿಕೇಷನ್, ಡಾಟಾ ಸೈನ್ಸ್ & ವಿಷುವಲೈಜೇಷನ್, ಮಿಡಿಯಾ & ಫೀಲಂ ಮೇಕಿಂಗ್, ಸಪ್ಲೈ ಚೈನ್ ಮ್ಯಾನೇಜಮೆಂಟ್ ವಿಷಯಗಳ ಕುರಿತು ಪದವಿ ವಿದ್ಯಾರ್ಥಿಗಳಿಗೆ ತರಬೇತಿ ನೀಡಲಾಗುತ್ತಿದೆ.ಬಹುರಾಷ್ಟ್ರೀಯ ಕಂಪನಿಗಳೊಂದಿಗೆ ಸಂಯೋಜನೆ ಹೊಂದಿದ ಕ್ಲೌಡ್ ದಟ್, ಇನೋವೇಟೀವ್ ಫಿಲಂ ಅಕಾಡೆಮಿ, ಅನಿಮೇಷನ್ ಸಂಸ್ಥೆಗಳು ತರಬೇತಿ ನೀಡುತ್ತಿವೆ ಎಂದು ವೇಮಣ್ಣ.ಟಿ ತಿಳಿಸಿದರು.ತರಬೇತಿ ನೀಡುತ್ತಿರುವ ಸಂಸ್ಥೆಗಳ ಪ್ರೊಫೈಲ್ ವಿವರಗಳನ್ನು ಪರಿಶೀಲಿಸಿ ಮಾಹಿತಿ ನೀಡುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗೆ ಸೂಚಿಸಿದರು. ಜಿಲ್ಲೆಯ ಕೈಗಾರಿಕಾ ಬೇಡಿಕೆ ಸಮೀಕ್ಷೆ ಮಾಹಿತಿ ಆಧರಿಸಿ, ಸರ್ಕಾರಿ ಹಾಗೂ ಖಾಸಗಿ ಐಟಿಐ ಮತ್ತು ಜಿ.ಟಿ.ಟಿ.ಸಿ ಗಳಲ್ಲಿ ನೂತನವಾದ ಕೋರ್ಸುಗಳನ್ನು ಆರಂಭಿಸಲು ಪ್ರಸ್ತಾವನೆ ಸಲ್ಲಿಸುವ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಡೇ ನಲ್ಮ್ ಯೋಜನೆ ಅನುಷ್ಠಾನದಲ್ಲಿ ಪ್ರಗತಿ ಸಾಧಿಸುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಪೌರಾಯುಕ್ತರಿಗೆ ಸೂಚಿಸಿದರು.

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಜಿಲ್ಲಾ ಮಟ್ಟದಲ್ಲಿ ರಚಿಸಿರುವ ಎಲ್ಲಾ ಸಮಿತಿಗಳ ಮುಖ್ಯಸ್ಥರೊಂದಿಗೆ ಸಮನ್ವಯ ಸಾಧಿಸಿ ಜುಲೈ.20ರ ಒಳಗಾಗಿ ಸಮಿತಿ ಸಭೆಗಳನ್ನು ಜರುಗಿಸಿ, ಅನುಪಾಲನಾ ವರದಿಯನ್ನು ನೀಡುವಂತೆ ಕೌಶಲ್ಯ ಮಿಷನ್ ಅಭಿಯಾನ ವ್ಯವಸ್ಥಾಪಕ ಅತಿಕ್ ರೆಹಮಾನ್ ಅವರಿಗೆ ಜಿಲ್ಲಾಧಿಕಾರಿ.ಟಿ.ವೆಂಕಟೇಶ್ ನಿರ್ದೇಶನ ನೀಡಿದರು.ಜಿಲ್ಲಾ ಕೈಗಾರಿಕಾ ಕೇಂದ್ರ ಜಂಟಿ ನಿರ್ದೇಶಕ ಬಿ. ಆನಂದ್, ಮಹಿಳಾ ಮತ್ತು ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹೇಂದ್ರಕುಮಾರ್, ವಿವಿಧ ನಗರಸಭೆಗಳ ಪೌರಾಯುಕ್ತರು, ವಿವಿಧ ಕಾಲೇಜುಗಳ ಪ್ರಾಂಶುಪಾಲರು, ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಬಡಾವಣೆ ಪೋಲೀಸ್ ಠಾಣೆ: ಹಳೆ ಕಳ್ಳತನ ಪ್ರಕರಣಗಳಲ್ಲಿ ಭಾಗಿಯಾದವರ ಪರೇಡ್

» ಚಿತ್ರದುರ್ಗ

ಚಿತ್ರದುರ್ಗ ಬಡಾವಣೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬರುವ ಹಳೆ ಕಳ್ಳತನ ಪ್ರಕರಣಗಳಲ್ಲಿ ಭಾಗಿಯಾದ ವ್ಯಕ್ತಿಗಳನ್ನು (ಎಂಓಬಿ) ಭಾನುವಾರ ಠಾಣೆಗೆ ಕರೆಯಿಸಿ ಬಡಾವಣೆ ವೃತ್ತ ಸಿಪಿಐ ನಯೀಂ ಅಹಮದ್ ಮತ್ತು ಉಪನಿರೀಕ್ಷಕ ಟಿ.ರಘು ನೇತೃತ್ವದಲ್ಲಿ ಎಂಓಬಿ ಆರೋಪಿಗಳ ಪರೇಡ್ ನಡೆಸಲಾಯಿತು. ಯಾವುದೇ ಕಳ್ಳತನ ಪ್ರಕರಣಗಳಲ್ಲಿ ಭಾಗಿಯಾಗದಂತೆ ಮತ್ತು ಉತ್ತಮ ರೀತಿಯಲ್ಲಿ ಜೀವನ ನಡೆಸುವಂತೆ ಹಾಗೂ ನಿಮ್ಮ ಚಲನವಲನದ ಬಗ್ಗೆ ನಿಗಾ ವಹಿಸಿದ್ದು, ಒಂದೇ ವೇಳೆ ಮತ್ತೆ ಕಳ್ಳತನ ಪ್ರಕರಣದಲ್ಲಿ ಭಾಗಿಯಾದರೆ ನಿಮ್ಮ ಮೇಲೆ ಕಾನೂನು ಕ್ರಮಕೈಗೊಳ್ಳಲಾಗುವುದು ಎಂದು ಪೊಲೀಸ್ ಅಧಿಕಾರಿಗಳು ಹಳೆ ಕಳ್ಳತನ ಪ್ರಕರಣಗಳಲ್ಲಿ ಭಾಗಿಯಾದ ವ್ಯಕ್ತಿಗಳಿಗೆ ಪರೇಡ್ ಸಂದರ್ಭದಲ್ಲಿ ಸೂಚನೆ ನೀಡಿದರು.ರಾತ್ರಿ ವೇಳೆಯಲ್ಲಿ ಪೊಲೀಸ್ ಸಿಬ್ಬಂದಿಯವರು ಚೆಕ್ ಮಾಡಲು ಬಂದಾಗ ಹಾಜರಿರಬೇಕು. ಯಾವುದೇ ಕಾರಣಕ್ಕೂ ನಮಗೆ ಮಾಹಿತಿ ನೀಡದೇ ಕೇಂದ್ರ ಸ್ಥಾನ ಬಿಡಬಾರದು ಎಂದು ಎಂಓಬಿ ಪ್ರಕರಣಗಳ ವ್ಯಕ್ತಿಗಳಿಗೆ ಎಚ್ಚರಿಕೆ ನೀಡಲಾಯಿತು.

### ಬೆಸ್ಕಾಂ: ನೀರಾವರಿ ಪಂಪ್‌ಸೆಟ್ ಬಳಕೆದಾರರು ಆರ್‌ಆರ್ ಸಂಖ್ಯೆಗೆ ಆಧಾರ್ ಲಿಂಕ್ ಕಡ್ಡಾಯ

» ಚಿತ್ರದುರ್ಗ

ಚಿತ್ರದುರ್ಗ ನಗರ ಉಪವಿಭಾಗ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಕೃಷಿ ನೀರಾವರಿ ಪಂಪ್‌ಸೆಟ್ ಬಳಕೆದಾರರು ತಮ್ಮ ನೀರಾವರಿ ಪಂಪ್‌ಸೆಟ್‌ನ ವಿದ್ಯುತ್ ಆರ್.ಆರ್.ಸಂಖ್ಯೆಗೆ ಕಡ್ಡಾಯವಾಗಿ ಆಧಾರ್ ಸಂಖ್ಯೆಯನ್ನು ಜೋಡಣೆ ಮಾಡಬೇಕು ಎಂದು ಬೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ತಿಳಿಸಿದ್ದಾರೆ. ಹಾಲಿ ಇರುವ ಕೃಷಿ ಪಂಪ್‌ಸೆಟ್‌ನ ವಾರಸುದಾರರು ಮರಣ ಹೊಂದಿದ್ದಲ್ಲಿ ಪ್ರಸ್ತುತ ಪಹಣಿಯಲ್ಲಿರುವ ಆಧಾರ್ ಕಾರ್ಡ್, ಮೊಬೈಲ್ ಸಂಖ್ಯೆ, ಹಿಂದಿನ ವಾರಸುದಾರರ ಮರಣ ಪ್ರಮಾಣ ಪತ್ರ, ಛಾಪಾಕಾಗದ ಹಾಗೂ ಪಹಣಿಯಲ್ಲಿ ಜಂಟಿ ಖಾತೆಯಾಗಿದ್ದರೆ ಉಳಿದವರ ಒಪ್ಪಿಗೆ ಪತ್ರ, ಕ್ರಯಪತ್ರದ ದಾಖಲೆಯನ್ನು ಸಮೀಪದ ಬೆಸ್ಕಾಂ ಶಾಖಾ ಕಚೇರಿ ಅಥವಾ ಸಂಬಂಧಿಸಿದ ಪವರ್ ಮ್ಯಾನ್ ಅಥವಾ ಮೀಟರ್ ರೀಡರ್‌ಗಳಿಗೆ ಸಲ್ಲಿಸಿ ಹಾಲಿ ಆರ್.ಆರ್.ಸಂಖ್ಯೆಯಲ್ಲಿರುವ ಹೆಸರನ್ನು ಬದಲಾವಣೆ ಮಾಡಿಸಿಕೊಳ್ಳಬೇಕು ಎಂದು ಬೆಸ್ಕಾಂ ಕಾರ್ಯನಿರ್ವಾಹಕ ಇಂಜಿನಿಯರ್ ತಿಳಿಸಿದ್ದಾರೆ.

### ಪದ್ಮಶ್ರೀ ಪ್ರಶಸ್ತಿಗೆ ಅರ್ಜಿ

» ದಾವಣಗೆರೆ

ಸಮಾಜದ ಯಾವುದೇ ಕ್ಷೇತ್ರಗಳಲ್ಲಿ ಅಂದರೆ ಕಲೆ, ಸಾಹಿತ್ಯ ಮತ್ತು ಶಿಕ್ಷಣ, ಕ್ರೀಡೆ, ವೈದ್ಯಕೀಯ, ಸಮಾಜ ಸೇವೆ, ವಿಜ್ಞಾನ ಮತ್ತು ಇಂಜಿನಿಯರಿಂಗ್, ಸಾರ್ವಜನಿಕ ವ್ಯವಹಾರಗಳು, ನಾಗರೀಕ ಸೇವೆ, ವ್ಯಾಪಾರ ಮತ್ತು ಕೈಗಾರಿಕೆ ಇತ್ಯಾದಿಗಳಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿರುವ ವ್ಯಕ್ತಿಗಳಿಗೆ 2025ನೇ ಸಾಲಿನ ಪದ್ಮಶ್ರೇಣಿಯ ಪ್ರಶಸ್ತಿಗಳಾದ 'ಪದ್ಮ ವಿಭೂಷಣ', 'ಪದ್ಮ ಭೂಷಣ' ಮತ್ತು 'ಪದ್ಮಶ್ರೀ' ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ. ಪ್ರಶಸ್ತಿಗಳಿಗೆ ಅನ್ವಯಿಸುವ ನಿಯಾಮವಳಿಗಳು https://padmaawards.gov.in ರಲ್ಲಿ ಲಭ್ಯವಿದ್ದು, ಆಗಸ್ಟ್ 31 ರೊಳಗೆ ನಿಗದಿತ ನಮೂನೆಯಲ್ಲಿ ಸಲ್ಲಿಸುವುದು ಹಾಗೂ ಸಾಫ್ಟ್ ಪ್ರತಿಗಳನ್ನು ಇ–ಮೇಲ್ ವಿಳಾಸ uspolitical-dpar@karnataka.gov.in ಸಲ್ಲಿಸಬೇಕು.

## ಪರಶುರಾಮಪುರ : ಭೂಮಿಗೆ ಗಂಗೆತಂದ ಭಗೀರಥರು

■ ಚಳ್ಳಕೆರೆ

ರಾಜಕೀಯ ಕ್ಷೇತ್ರದಲ್ಲಿ ಸಮುದಾಯದ ಪಾತ್ರ ಅಪಾರವಾಗಿದ್ದರೂ ಯಾವುದೇ ರಾಜಕೀಯ ಪಕ್ಷಗಳು ಈ ಸಮುದಾಯವನ್ನು ಮೇಲೆತ್ತುವಲ್ಲಿ ವಿಫಲವಾಗಿವೆ. ಜನಾಂಗದ ಮಕ್ಕಳಿಗೆ ಶಿಕ್ಷಣ ಕೊಡಿಸುವತ್ತ ಪೋಷಕರು ಮುಂದಾಗಬೇಕೆಂದು ಹೊಸದುರ್ಗ ಶ್ರೀಪುರುಷೋತ್ತಮಾನಂದಪುರಿ ಸ್ವಾಮೀಜಿ ಹೇಳಿದರು. ಅವರು, ಸೋಮವಾರ ಪರಶುರಾಮಪುರ ಗ್ರಾಮದಲ್ಲಿ ಉಪ್ಪಾರ ಸಮುದಾಯ ಹಮ್ಮಿಕೊಂಡಿದ್ದ ಭಗೀರಥ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಭಗೀರಥ ಮಹರ್ಷಿಗಳ ಮಹಾನ್ ಕಾರ್ಯವನ್ನು ನಾವೆಲ್ಲರೂ ಇಂದು ನೆನಪಿಸಿಕೊಳ್ಳುತ್ತಿದ್ದೇವೆ.

ಪುಟ ↘ 2



## ಮಾಡನಾಯಕನಹಳ್ಳಿ: 1ನೇ ತರಗತಿ ಆಂಗ್ಲ ಮಾಧ್ಯಮ ಶುರು

ಚಿತ್ರದುರ್ಗ: ಚಿತ್ರದುರ್ಗ ತಾಲ್ಲೂಕಿನ ಮಾಡನಾಯಕನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸೋಮವಾರ ಒಂದನೇ ತರಬೇತಿ ಆಂಗ್ಲ ಮಾಧ್ಯಮ ಪ್ರಾರಂಭ ಹಾಗೂ ಸ್ಮಾರ್ಟ್ ಕ್ಲಾಸ್ ಉದ್ಘಾಟನೆ ಕಾರ್ಯಕ್ರಮ ನೆರವೇರಿತು. ಈ ಸಂದರ್ಭದಲ್ಲಿ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಸಿ.ಹನುಮಂತಪ್ಪ, ಮುಖ್ಯಶಿಕ್ಷಕ ಎನ್.ಆರ್.ಶಶಿಧರ್, ಮಾಜಿ ಅಧ್ಯಕ್ಷರಾದ ಸಿ.ಎನ್. ಮೈಲಾರಪ್ಪ, ಕಾಂತೇಶ್, ಮಲ್ಲಿಕಾರ್ಜುನ್, ತಿಪ್ಪೇಸ್ವಾಮಿ, ಅಶೋಕ್, ಮಲ್ಲಣ್ಣ ಹಾಗೂ ಶಿಕ್ಷಕರಾದ ಅರ್ಪಣ, ರತ್ನಮ್ಮ ಸೇರಿದಂತೆ ಇತರರು ಇದ್ದರು.



## ಪ್ರಮುಖ ಸುದ್ದಿ

ಸ್ನೇಹ ಸಂಭ್ರಮದಲ್ಲಿ ತಹಶೀಲ್ದಾರ್ ಡಾ.ನಾಗವೇಣಿ

# ಜೀವನದ ಸಂಕಷ್ಟಗಳಿಗೆ ಎದೆಗುಂದದೆ ಧೈರ್ಯವಾಗಿ ಎದುರಿಸಿ

» ಚಿತ್ರದುರ್ಗ

ವಿದ್ಯಾರ್ಥಿಗಳ ಜೀವನದಲ್ಲಿ ಸೋಲು–ಗೆಲುವು, ಸಂಕಷ್ಟಗಳು ಎದುರಾಗುವುದು ಸಹಜ. ಜೀವನದ ಸಂಕಷ್ಟಗಳಿಗೆ ಎದೆಗುಂದದೆ ಧೈರ್ಯವಾಗಿ ಎದುರಿಸಬೇಕು ಎಂದು ಚಿತ್ರದುರ್ಗ ತಹಶೀಲ್ದಾರ್ ಡಾ.ನಾಗವೇಣಿ ಹೇಳಿದರು.

ನಗರದ ತ.ರಾ.ಸು ರಂಗಮಂದಿರದಲ್ಲಿ ಸೋಮವಾರ ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ದಾವಣಗೆರೆ ವಿಶ್ವವಿದ್ಯಾಲಯ, ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ವತಿಯಿಂದ ಆಯೋಜಿಲಾಗಿದ್ದ ಸ್ನೇಹ ಸಂಭ್ರಮ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.ಹೆಣ್ಣೊಂದು ಕಲಿತರೆ ಶಾಲೆಯೊಂದು ತೆರೆದಂತೆ, ಅದರಂತೆ ಹೆಣ್ಣು ಸಮಾಜ, ಕುಟುಂಬ, ಸಂಕಷ್ಟಗಳನ್ನು ಸರಾಗವಾಗಿ ಸಾಗಿಸುತ್ತಾಳೆ. ಹಾಗಾಗಿ ಹೆಣ್ಣು ಮಕ್ಕಳು ಹೆಚ್ಚಿನ ವಿದ್ಯಾಭ್ಯಾಸ ಮಾಡಬೇಕು. ಮುಂದೆ ಯಾವುದೇ ಉನ್ನತ ಹುದ್ದೆಗಳಿಗೆ ಸೇರಿದರೆ ಸಮಾಜಕ್ಕೆ, ಸುತ್ತಮುತ್ತಲಿನವರಿಗೆ,



ನಿಮ್ಮ ಕುಟುಂಬಗಳಿಗೆ ಒಳ್ಳೆಯ ಕೆಲಸಗಳನ್ನು ಮಾಡುವ ಮೂಲಕ ವಿನಯವಂತರಾಗಿ ಬಾಳಬೇಕು ಕಿವಿಮಾತು ಹೇಳಿದರು. ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಪ್ರಾಂಶುಪಾಲ ಡಾ.ಹೆಚ್. ಗುಡ್ಡದೇಶ್ವರಪ್ಪ ಮಾತನಾಡಿ, ಉನ್ನತ ಶಿಕ್ಷಣ ಮಹಿಳೆಯರಿಗೆ ವಿಶೇಷ ಅವಕಾಶ ನೀಡಲಿದೆ. ನೋವುಗಳನ್ನು ಸವಾಲಾಗಿ ಸ್ವೀಕರಿಸಬೇಕು. ಸೋಲು ಎದುರಾದಾಗ ಎದೆಗುಂದದೆ ನಿರಂತರ ಛಲದಿಂದ ಸಾಗಿದರೆ ಖಂಡಿತ ಗೆಲವು ಲಭಿಸಲಿದೆ ಎಂದರು.ಕನ್ನಡ ವಿಭಾಗದ ಮುಖ್ಯಸ್ಥ ಮಂಜುನಾಥ್ ಮಾತನಾಡಿ, ಜೀವನದಲ್ಲಿ ಸ್ವಾಭಿಮಾನ, ಆತ್ಮಗೌರವ, ವೃತ್ತಿಗೌರವಕ್ಕೆ ಧಕ್ಕೆ ಬಾರದಂತೆ ಬದುಕಬೇಕು. ನಾವು ಮಾತನಾಡುವ ಮಾತಿಗೆ ಸಮಾಜದಲ್ಲಿ ಮನ್ನಣೆ ಸಿಗಬೇಕು. ಹಣ ಸಂಪಾದನೆ ಮಾಡುವುದು ಸಂಪಾದನೆಯಲ್ಲ, ಉತ್ತಮ ವ್ಯಕ್ತಿತ್ವ ಸಂಪಾದನೆ ಮಾಡಬೇಕು. ವಿದ್ಯಾರ್ಥಿಗಳು ಮುಂದಿನ ಪೀಳಿಗೆಗೆ ಅತ್ಯುತ್ತಮ ವ್ಯಕ್ತಿಗಳಾಗಿ, ಜೀವನದಲ್ಲಿ ಇನ್ನಷ್ಟು ಉತ್ಕೃಷ್ಟವಾಗಿ ಬೆಳೆಯಬೇಕು. ವಿದ್ಯೆ, ವಿನಯ, ಆತ್ಮ ವಿಶ್ವಾಸ ನಿಮ್ಮಲ್ಲಿದ್ದರೆ ಯಶಸ್ಸು ಕಾಣಬಹುದು ಎಂದರು.

ಕಾರ್ಯಕ್ರಮದಲ್ಲಿ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನ ಪ್ರಾಧ್ಯಾಪಕರಾದ ಡಾ. ಸಿ.ಚನ್ನಕೇಶವ, ಲೀಲಾವತಿ, ಡಾ. ಡಿ.ಓ.ಸಿದ್ದಪ್ಪ, ಡಾ.ಶಿವಣ್ಣ, ಡಾ. ಮಧುಸೂದನ್, ಬಿ.ಹೆಚ್.ಕುಮಾರಸ್ವಾಮಿ, ಎಂ.ಗಿರೀಶ್, ಆರ್. ಶಿವಪ್ರಸಾದ್, ಆರ್. ವೆಂಕಟೇಶ್, ಸರಿತಾ, ಶಕುಂತಲ ಮತ್ತು ಬೋಧಕ ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಇದ್ದರು.

## ಫಾಸ್ಟ್ ನ್ಯೂಸ್

### ಜರ್ಮನಿ ನರ್ಸಿಂಗ್ ಕೆಲಸಕ್ಕೆ ಅರ್ಜಿ ಆಹ್ವಾನ

» ದಾವಣಗೆರೆ

ಜರ್ಮನಿ ಸರ್ಕಾರದಿಂದ ಮಾನ್ಯತೆ ಪಡೆದಿರುವ ಮೆ// ಟ್ಯಾಲೆಟ್ ಆರೇಂಜ್ (Talent Orange) ಸಂಸ್ಥೆಯು, ಭಾರತ ದೇಶದಿಂದ ನರ್ಸ್ ಆಗಿ ಕೆಲಸ ನಿರ್ವಹಿಸಲು ಬಿ.ಎಸ್ಸಿ, ಜಿಎನ್‌ಎಂ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳಿಗೆ ಜರ್ಮನಿಯಲ್ಲಿ ಉದ್ಯೋಗಕ್ಕಾಗಿ ಅವಕಾಶ ಕಲ್ಪಿಸಲಾಗಿದೆ. ಈ ವಿದ್ಯಾರ್ಹತೆ ಹೊಂದಿರುವ ನರ್ಸಿಂಗ್ ಅಭ್ಯರ್ಥಿಗಳನ್ನು ಆಯ್ಕೆಗೊಳಿಸಿ ಕೇರಳ ರಾಜ್ಯದ ತಿರುವನಂತಪುರದ ತರಬೇತಿ ಕೇಂದ್ರದಲ್ಲಿ 8 ತಿಂಗಳ ಕಾಲ ಜರ್ಮನ್ ಭಾಷೆಯ ಬಗ್ಗೆ ತರಬೇತಿ ನೀಡಲಿದೆ. ಈ ಸಂಸ್ಥೆಯ ವತಿಯಿಂದ ಊಟದ ವ್ಯವಸ್ಥೆ ಹಾಗೂ ಉಚಿತ ವಸತಿ ಸೌಲಭ್ಯ ನೀಡುವುದಲ್ಲದೇಉಚಿತಪ್ರಯಾಣದವ್ಯವಸ್ಥೆಯನ್ನು ಒದಗಿಸಲಾಗುವುದು. ಜರ್ಮನಿಯಲ್ಲಿ ಕೆಲಸ ನಿರ್ವಹಿಸಲು ಉತ್ಸುಕರಾದವರು ಈಗಾಗಲೇ ನರ್ಸಿಂಗ್ ಪೂರ್ಣಗೊಳಿಸಿದ ಉದ್ಯೋಗಾಂಕ್ಷಿಗಳು ಕಾರ್ಮಿಕ ಅಧಿಕಾರಿಗಳ ಕಚೇರಿ, ಬಿ.ಎಸ್.ಎನ್.ಎಲ್ ಆಫೀಸ್ 2ನೇ ಮಹಡಿ, ಶ್ರೀ ಡಿ. ದೇವರಾಜ ಅರಸು ಬಡಾವಣೆ, ಸಂಗೊಳ್ಳಿ ರಾಯಣ್ಣ ವೃತ್ತ, ಪಿ.ಬಿ ರೋಡ್ ದಾವಣಗೆರೆ ಕಚೇರಿಯಲ್ಲಿ ನೋಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗೆ ಕಾರ್ಮಿಕ ಅಧಿಕಾರಿಗಳ ಕಚೇರಿಯ ದೂ.ಸಂ:08192-237332 ಸಂಪರ್ಕಿಬೇಕೆಂದು ಕಾರ್ಮಿಕ ಅಧಿಕಾರಿ ತಿಳಿಸಿದ್ದಾರೆ.

### ಜಿಲ್ಲಾ ಸರ್ಕಾರಿ ವಕೀಲರ ಹುದ್ದೆಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲೆಯ ಜಿಲ್ಲಾ ಸರ್ಕಾರಿ ವಕೀಲರ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ. ಜುಲೈ 30 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಜಿಲ್ಲಾ ಸರ್ಕಾರಿ ವಕೀಲರ ಹುದ್ದೆಯನ್ನು ತುಂಬುವ ಸಲುವಾಗಿ ಈಗಾಗಲೇ ಅಧಿಸೂಚನೆ ಹೊರಡಿಸಲಾಗಿದೆ. ಆಸಕ್ತಿವುಳ್ಳ ಹಾಗೂ 10 ವರ್ಷಗಳ ಕಾಲ ವಕೀಲಿ ವೃತ್ತಿ ಪೂರೈಸಿದ ಅರ್ಹ ವಕೀಲರು ಇದೇ ಜುಲೈ 30ರ ಸಂಜೆ 5.30 ರೊಳಗಾಗಿ ಚಿತ್ರದುರ್ಗ ಜಿಲ್ಲಾಧಿಕಾರಿಗಳ ಕಾರ್ಯಾಲಯಕ್ಕೆ ನಿಗದಿಪಡಿಸಿದ ಅರ್ಜಿ ನಮೂನೆಯಲ್ಲಿ ಸೂಕ್ತ ದಾಖಲೆಗಳೊಂದಿಗೆ ಸಲ್ಲಿಸಬೇಕು.

### ಹೊಳಲ್ಕೆರೆಯಲ್ಲಿ 13.4 ಮಿ.ಮೀ ಮಳೆ

» ಚಿತ್ರದುರ್ಗ

ಜಿಲ್ಲೆಯಲ್ಲಿ ಭಾನುವಾರ ಸುರಿದ ಮಳೆ ವಿವರದನ್ವಯ ಹೊಳಲ್ಕೆರೆಯಲ್ಲಿ 13.4 ಮಿ.ಮೀ ಮಳೆಯಾಗಿದ್ದು, ಇದು ಜಿಲ್ಲೆಯ ಅತ್ಯಧಿಕ ಮಳೆಯಾಗಿದೆ. ಹೊಳಲ್ಕೆರೆ ತಾಲ್ಲೂಕಿನ ರಾಮಗಿರಿ 6.4 ಮಿ.ಮೀ, ಚಿಕ್ಕಜಾಜೂರು 9.2 ಮಿ.ಮೀ, ಬಿ.ದುರ್ಗ 8.2 ಮಿ.ಮೀ, ಹೆಚ್.ಡಿ.ಪುರ 12.3, ತಾಳ್ಯದಲ್ಲಿ 5.2 ಮಿ.ಮೀ ಮಳೆಯಾಗಿದೆ. ಹೊಸದುರ್ಗ ತಾಲ್ಲೂಕಿನ ಹೊಸದುರ್ಗದಲ್ಲಿ 10.8 ಮಿ.ಮೀ, ಬಾಗೂರು 7.2 ಮಿ.ಮೀ, ಮಾಡದಕರೆ 10 ಮಿ.ಮೀ, ಶ್ರೀರಾಂಪುರದಲ್ಲಿ 9 ಮಿ.ಮೀ ಮಳೆಯಾಗಿದೆ. ಹಿರಿಯೂರು ತಾಲ್ಲೂಕಿನ ಹಿರಿಯೂರಿನಲ್ಲಿ 6.2 ಮಿ.ಮೀ, ಇಕ್ಕನೂರು 5.4 ಮಿ.ಮೀ, ಈಶ್ವರಗೆರೆ 3.2 ಮಿ.ಮೀ, ಬಬ್ಬೂರು 3.8 ಮಿ.ಮೀ, ಸೂಗೂರು 3.2 ಮಿ.ಮೀ ಮಳೆಯಾಗಿದೆ. ಚಿತ್ರದುರ್ಗ ತಾಲ್ಲೂಕಿನ ಚಿತ್ರದುರ್ಗ-1ರಲ್ಲಿ 5.4 ಮಿ.ಮೀ, ಚಿತ್ರದುರ್ಗ-2ರಲ್ಲಿ 5.4 ಮಿ.ಮೀ, ತುರುವನೂರು 4.4 ಮಿ.ಮೀ, ಭರಮಸಾಗರ 7 ಮಿ.ಮೀ, ಹಿರೇಗುಂಟನೂರು 1.1 ಮಿ.ಮೀ, ಸಿರಿಗೆರೆ 8.2 ಮಿ.ಮೀ ಹಾಗೂ ಐನಹಳ್ಳಿಯಲ್ಲಿ 13.2 ಮಿ.ಮೀ ಮಳೆಯಾಗಿದೆ ಎಂದು ಜಿಲ್ಲಾಧಿಕಾರಿಗಳ ಕಚೇರಿ ಪ್ರಕಟಣೆ ತಿಳಿಸಿದೆ.

### ಪರಶುರಾಮಪುರ : ಭೂಮಿಗೆ ಗಂಗೆತಂದ ಭಗೀರಥರು

» ಮೊದಲ ಪುಟದಿಂದ

ಭಗವಂತನ ಮೇಲೆ ಅಪಾರವಾದ ವಿಶ್ವಾಸ, ಗೌರವ ಹೊಂದಿದ್ದ ಭಗೀರಥರು ಗಂಗೆಯನ್ನು ಮೇಲಕ್ಕೆ ತರಲು ಭಗವಂತನನ್ನು ಪ್ರಾರ್ಥಿಸಿ ಕಾರ್ಯದಲ್ಲಿ ಸಫಲರಾದರು. ಉಪ್ಪಾರ ಸಮುದಾಯದ ಸರ್ವತೋಮುಖ ಅಭಿವೃದ್ದಿಗೆ ಸಮುದಾಯ ಇನ್ನೂ ಹೆಚ್ಚಿ ಸಂಘಟಿತರಾಗಬೇಕು, ಸಮುದಾಯದ ವಿವಿಧ ಪಕ್ಷದ ರಾಜಕೀಯ ಮುಖಂಡರೂ ಸಹ ಜನಾಂಗದ ಶ್ರೇಯಸ್ಸಿಗೆ ಸಹಕಾರ ನೀಡಬೇಕು ಎಂದರು.

ಕಾಂಗ್ರೆಸ್ ಪಕ್ಷ ಹಿರಿಯ ಮುಖಂಡ ಟಿ.ತಿಪ್ಪೇಸ್ವಾಮಿ ಮಾತನಾಡಿ, ಲೋಕಕಲ್ಯಾಣಕ್ಕಾಗಿ ಅನೇಕ ಮಹಾನೀಯರು ತಮ್ಮದೇಯಾದ ರೀತಿಯಲ್ಲಿ ಈ ಸಮಾಜಕ್ಕೆ ಹಲವಾರು ಕೊಡುಗೆಗಳನ್ನು ನೀಡಿದ್ದಾರೆ. ಅದರಂತೆ ಭೂಮಿಯಲ್ಲಿ ಅಡಗಿದ್ದ ಗಂಗೆಯನ್ನು ಜನರ ಕಲ್ಯಾಣಕ್ಕಾಗಿ ಭೂಮಿಯಿಂದ ಮೇಲಕ್ಕೆ ತಂದ ಎಲ್ಲರಿಗೂ ಗಂಗಾದರ್ಶನ ಮಾಡಿಸಿದ ಕೀರ್ತಿ ಭಗೀರಥ ಮಹರ್ಷಿಗಳದ್ದು, ಭಗೀರಥ ಮಹರ್ಷಿಗಳ ಪ್ರಯತ್ನದಿಂದ ಗಂಗೆ ಸಮೃದ್ದಿಯಾಗಿ ಈ ಭೂಮಿಯಚು ಮೇಲೆ ಹರಿದಿದೆ. ರೈತ, ಕಾರ್ಮಿಕರೂ ಸೇರಿದಂತೆ ಎಲ್ಲರ ಹಿತವನ್ನು ರಕ್ಷಿಸಿದ ಕೀರ್ತಿ ಭಗೀರಥ ಮಹರ್ಷಿಗಳದ್ದು ಎಂದರು. ಉಪ್ಪಾರ ಸಂಘದ ತಾಲ್ಲೂಕು ಅಧ್ಯಕ್ಷ ಎಚ್.ಹನುಮಂತಪ್ಪ, ಗೌರವಾಧ್ಯಕ್ಷ ಎಸ್. ಯಲ್ಲಪ್ಪ, ನಿವೃತ್ತ ಡಿವೈಎಸ್ಪಿ ನಾಗರಾಜು, ಡಿ.ಕೆ. ರವಿಕುಮಾರ್ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

---


ಮಗನ ಉಪನಯನ ಮುಗಿಸಿ ಊರಿಗೆ ಮರಳುಗಾಗಿ ದುರ್ಘಟನೆ

# ಡಿವೈಡರ್‌ಗೆ ಕಾರು ಡಿಕ್ಕಿ: ಸ್ಥಳದಲ್ಲೇ ದಂಪತಿ ಸಾವು

» ಚಳ್ಳಕೆರೆ


ತಾಲ್ಲೂಕಿನ ರಾಷ್ಟ್ರೀಯ ಹೆದ್ದಾರಿ 150(ಎ) ತಳಕು ಠಾಣಾ ವ್ಯಾಪ್ತಿಯ ಹೊಸಹಳ್ಳಿ ಕ್ರಾಸ್ ಬಳಿ ಸೋಮವಾರ ಬೆಳಗಿನ ಜಾವ ಬೆಂಗಳೂರಿನಿಂದ ಬಳ್ಳಾರಿಗೆ ಚಲಿಸುತ್ತಿದ್ದ ಕಾರೊಂದು ಅತಿವೇಗದಿಂದ ಚಾಲಕನ ಅಜಾಗರೂಕತೆಯಿಂದ ರಸ್ತೆಯ ಎಡಭಾಗದ ಡಿವೈಡರ್‌ಗೆ ಡಿಕ್ಕಿ ಹೊಡೆದ ಪರಿಣಾಮ ಇಬ್ಬರು ಸ್ಥಳದಲ್ಲೇ ಮೃತಪಟ್ಟು, ಕಾರಿನಲ್ಲಿದ್ದ ಮೂವರು ಗಾಯಗೊಂಡು ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ಹೆಚ್ಚಿನ ಚಿಕಿತ್ಸೆಗೆ ಜಿಲ್ಲಾ ಆಸ್ಪತ್ರೆಗೆ ದಾಖಲು ಮಾಡಲಾಗಿದೆ.

ಬಳ್ಳಾರಿ ನಗರದ ಸತ್ಯನಾರಾಯಣಪೇಟೆ ನಿವಾಸಿ ಬಿ.ಎನ್.ಗೋಪಿನಾಥ(46), ಪತ್ನಿ ಶ್ರೀಲಲಿತ(42) ಮೃತಪಟ್ಟವರಾಗಿದ್ದು, ಇವರ ಮಕ್ಕಳಾದ ಶ್ರೇಯಾ(17), ಶ್ರೀನಿವಾಸ್(12), ಚಾಲಕ ಸುರೇಶ್(23) ಗಾಯಗೊಂಡು ಜಿಲ್ಲಾ ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಮೃತಪಟ್ಟ ಬಿ.ಎನ್.ಗೋಪಿನಾಥ ಗೃಹರಕ್ಷಕ ದಳದ ಅಧಿಕಾರಿಯಾಗಿದ್ದು, ಇತ್ತೀಚೆಗೆ ತಾನೇ ಬಳ್ಳಾರಿಯಿಂದ ಮಂಗಳೂರಿಗೆ ವರ್ಗಾವಣೆಯಾಗಿತ್ತು. ಪತ್ನಿ ಶ್ರೀಲಲಿತ ಶಿಕ್ಷಕಿಯಾಗಿದ್ದು, ಜುಲೈ 11ರ ಗುರುವಾರ ತಮ್ಮ ಪುತ್ರ ಶ್ರೀನಿವಾಸ್‌ರವರ



ಉಪನಯನ ನಿಮಿತ್ತ ಬೆಂಗಳೂರಿಗೆ ತೆರಳಿ ಅಲ್ಲಿನ ಎಲ್ಲಾ ಕಾರ್ಯಗಳನ್ನು ಮುಗಿಸಿ ಕರ್ತವ್ಯಕ್ಕೆ ಹಾಜರಾಗುವ ದೃಷ್ಟಿಯಿಂದ ಬೆಂಗಳೂರಿನಿಂದ ಬಳ್ಳಾರಿಗೆ ರೈಲಿನಲ್ಲಿ ಹೊರಟಿದ್ದರು.

ಮೃತಪಟ್ಟ ಇಬ್ಬರೂ ತಮ್ಮ ಪ್ರಯಾಣವನ್ನು ರೈಲು ಮೂಲಕವೇ ಮಾಡುತ್ತಿದ್ದು, ಭಾನುವಾರ ರಾತ್ರಿ ರೈಲ್ ತಪ್ಪಿದ ಹಿನ್ನೆಲೆಯಲ್ಲಿ ಬಾಡಿಗೆ ಕಾರನ್ನು ಪಡೆದು ರಾತ್ರಿ 10.45ಕ್ಕೆ ಬೆಂಗಳೂರಿನಿಂದ ಬಳ್ಳಾರಿ ಕಡೆಗೆ ಹೊರಟಿದ್ದರು. ತಳಕು ಹೊಸಹಳ್ಳಿ ಡಿವೈಡರ್ ಬಳಿ ಚಾಲಕ ಸುರೇಶ್ ನಿದ್ರೆಗೆ ಜಾರಿ ಅಪಘಾತಕ್ಕೆ ಕಾರಣ ಎನ್ನಲಾಗಿದೆ.



ಗಾಯಗೊಂಡ ಶ್ರೇಯ, ಶ್ರೀನಿವಾಸ್, ಚಾಲಕ ಸುರೇಶ್ ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಮೃತಪಟ್ಟ ಗೋಪಿನಾಥ ದಂಪತಿಗಳ ಅಂತ್ಯಕ್ರಿಯೆಯನ್ನು ಬೆಂಗಳೂರಿನ ಚಾಮರಾಜಪೇಟೆಯ ಮುಕ್ತಿಧಾಮದಲ್ಲಿ ಸೋಮವಾರ ನಡೆಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ. ಸುದ್ದಿ ತಿಳಿದ ಕೂಡಲೇ ಪ್ರಭಾರ ವೃತ್ತ ನಿರೀಕ್ಷಕ ರಾಜಫಕೃದ್ದೀನ್ ದೇಸಾಯಿ, ತಳಕು ಪಿಎಸ್‌ಐ ಲೋಕೇಶ್ ಸ್ಥಳಕ್ಕೆ ಭೇಟಿ ನೀಡಿ ಗಾಯಾಳುಗಳನ್ನು ರಾಷ್ಟ್ರೀಯ ಹೆದ್ದಾರಿ ಅಂಬ್ಯುಲೆನ್ಸ್‌ನಲ್ಲಿ ಚಳ್ಳಕೆರೆ ಆಸ್ಪತ್ರೆಗೆ ದಾಖಲಿಸಿದ್ದಾರೆ. ಡಿವೈಎಸ್ಪಿ ಟಿ.ಬಿ.ರಾಜಣ್ಣ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ತಳಕು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಚಾಲಕ ಮೇಲೆ ಹರಿದ ಲಾರಿ: ಸ್ಥಳದಲ್ಲೇ ಸಾವು

» ಚಳ್ಳಕೆರೆ

ರಾಷ್ಟ್ರೀಯ ಹೆದ್ದಾರಿ 150(ಎ) ಬುಡ್ನಹಟ್ಟಿ ಬಳಿ ಸೋಮವಾರ ಬೆಳ್ಳಂಬೆಳಗ್ಗೆ ಬೆಂಗಳೂರಿನಿಂದ ಬಳ್ಳಾರಿ ಕಡೆಗೆ ಚಲಿಸುತ್ತಿದ್ದ ಬುಲೋರೋಟ್ರಾಕ್ಸ್ ಚಾಲಕ ಸಿದ್ರಾಮಪ್ಪ(39) ತನ್ನ ವಾಹನದಿಂದ ಇಳಿದು ರಸ್ತೆ ದಾಟುವ ಸಂದರ್ಭದಲ್ಲಿ ಎದುರಿಗೆ ಬಂದ ಲಾರಿಯೊಂದು ಈತನ ತಲೆಯ ಮೇಲೆ ಹಾದುಹೋಗಿದ್ದು ಸ್ಥಳದಲ್ಲೇ ಮತಪಟ್ಟಿರುತ್ತಾನೆ.

ಯಾದಗಿರಿ ಜಿಲ್ಲೆಯ ಹುಣಸಗಿ ತಾಲ್ಲೂಕಿನ ಹೊಂಬಳಕಲ್ಲು ಗ್ರಾಮದ ಸಿದ್ರಾಮಪ್ಪ ಚಾಲಕನಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ವಾಹನವನ್ನು ಚಾಲನೆ ಮಾಡಿಕೊಂಡು ಬರುವ ಸಂದರ್ಭದಲ್ಲಿ ವಾಹನದಿಂದ ಇಳಿದು ರಸ್ತೆ ದಾಟುವ ಸಂದರ್ಭದಲ್ಲಿ ಈ ಅವಘಡ ಸಂಭವಿಸಿದೆ. ಮೃತನ ಪತ್ನಿ ಹನುಂಮತಿ ಚಳ್ಳಕೆರೆ ಠಾಣೆಗೆ ದೂರು ನೀಡಿದ್ದು ಪಿಎಸ್‌ಐ ಜೆ.ಶಿವರಾಜ್ ಪ್ರಕರಣ ದಾಖಲಿಸಿದ್ದಾರೆ.

---

## ಚಿತ್ರದುರ್ಗ ಜಿಲ್ಲೆಯನ್ನು ಶೈಕ್ಷಣಿಕ ಜಿಲ್ಲೆಯನ್ನಾಗಿ ರೂಪಿಸುವ ಕನಸಿಗೆ ಶಿಕ್ಷಕರು ಸಹಕರಿಸಬೇಕು: ಡಿಡಿಪಿಐ

■ ಚಳ್ಳಕೆರೆ

ಶಿಕ್ಷಣ ಕ್ಷೇತ್ರ ಇಂದು ಹಲವಾರು ನೂತನ ಬದಲಾವಣೆಗಳ ಮೂಲಕ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಶ್ರಮಿಸುತ್ತಿದೆ. ವಿದ್ಯಾರ್ಥಿಗಳ ಭವಿಷ್ಯದ ಕನಸನ್ನು ನನಸು ಮಾಡುವ ಶಿಕ್ಷಕರ ಪಾತ್ರದ ಬಗ್ಗೆ ಎಲ್ಲರೂ ಗಮನಹರಿಸಬೇಕಿದೆ. ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಗುಣಾತ್ಮಕ ಶಿಕ್ಷಣ ನೀಡುವ ಮೂಲಕ ಶಿಕ್ಷಕರು ಶಿಕ್ಷಣ ಮೌಲ್ಯವನ್ನು ಹೆಚ್ಚಿಸಬೇಕೆಂದು ನೂತನ ಡಿಡಿಪಿಐ ಎಂ.ಆರ್. ಮಂಜುನಾಥ ತಿಳಿಸಿದರು.

ಚಿತ್ರದುರ್ಗ ಡಿಡಿಪಿಐ ಕಚೇರಿಯಲ್ಲಿ ಚಳ್ಳಕೆರೆ ತಾಲ್ಲೂಕಿನ ಸ್ನೇಹಿತರ ವೃಂದ ಅವರನ್ನು ಅಭಿಮಾನದಿಂದ ಸನ್ಮಾನಿಸಿದ ಸಂದರ್ಭದಲ್ಲಿ ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದರು. ಶಿಕ್ಷಣದ ಕಲಿಕೆಯಲ್ಲಿ ಆಸಕ್ತಿ ಮತ್ತು ವಿನಯ ಎರಡೂ ಪ್ರಮುಖ ವಿಷಯಗಳು. ಹಿಂದುಳಿದ ಪ್ರದೇಶವೆಂದು ಖ್ಯಾತಿಯಾಗಿ ಮತ್ಸಮುದ್ರ ಗ್ರಾಮದಲ್ಲಿ ಜನಿಸಿದ ನಾನು ಅಲ್ಲಿ ಪ್ರಾಥಮಿಕ ಶಿಕ್ಷಣ ಪಡೆದು, ಜಾಜೂರಿನಲ್ಲಿ ಪ್ರೌಢಶಾಲಾ ಅಭ್ಯಾಸ ಮಾಡಿದೆ. ಗ್ರಾಮಾಂತರ ಪ್ರದೇಶದ ಶಾಲೆಗಳು ಸಹ ವ್ಯಕ್ತಿ



ವಿಕಾಸದಲ್ಲಿ ಪಾತ್ರವಹಿಸುತ್ತವೆ ಎಂಬುವುದಕ್ಕೆ ನಾನು ಪ್ರಮುಖ ಕಾರಣವೆಂದರು. ಚಿತ್ರದುರ್ಗ ಜಿಲ್ಲೆಯಲ್ಲಿ ಶಿಕ್ಷಣ ಇಲಾಖೆಯ ಜವಾಬ್ದಾರಿಯುತ ಅಧಿಕಾರಿಯಾಗಿ ಕಾರ್ಯನಿರ್ವಹಿಸುವ ಅವಕಾಶವನ್ನು ಭಗವಂತ ನೀಡಿದ್ದು, ಇದನ್ನು ಸಾದಾರಪಡಿಸುವಲ್ಲಿ ದಕ್ಷ, ಪ್ರಾಮಾಣಿಕ ಪ್ರಯತ್ನ ನನ್ನದು ಎಂದರು.

ಸ್ನೇಹಿತರ ವೃಂದ ಹಿರಿಯ ಮುಖಂಡ, ನಿವೃತ್ತ ಶಿಕ್ಷಕ ಈ.ತಿಮ್ಮಣ್ಣ, ದಿಲೀಪ್‌ಕುಮಾರ್, ಭೀಮಣ್ಣ ಮುಂತಾದವರು ಅವರನ್ನು ಸನ್ಮಾನಿಸಿದರು.

## ವಾಣಿಜ್ಯ ಬೆಳೆ ಹತ್ತಿಯಲ್ಲಿ ಕೆಂಪಾಗುವಿಕೆಯ ನಿರ್ವಹಣಾ ಕ್ರಮ

» ದಾವಣಗೆರೆ

ಲಾಭದಾಯಕ ವಾಣಿಜ್ಯ ಬೆಳೆಗಳಲ್ಲಿ ಹತ್ತಿ ಬೆಳೆ ಪ್ರಮುಖವಾದದು. ಬಿಳಿ ಬಂಗಾರ ಎಂದು ಕರೆಯುವ ಹತ್ತಿಯನ್ನು ನೂಲಿನ ರಾಜ ಎಂದೂ ಕೂಡ ಕರೆಯುತ್ತಾರೆ. ಆದರೆ ಹತ್ತಿ ಬೆಳೆಗೆ ರೋಗ, ಕೀಟ ಬಾಧೆ ಹೆಚ್ಚು. ಇತ್ತೀಚಿನ ದಿನಗಳಲ್ಲಿ ಹತ್ತಿ ಗಿಡದ ಎಲೆಗಳು ಕೆಂಪಾಗುವುದನ್ನು ಹೆಚ್ಚು ಕಾಣುತ್ತಿದ್ದೇವೆ. ಹವಾಮಾನದ ವೈಪರಿತ್ಯದಿಂದಾಗಿ ಪೋಷಕಾಂಶಗಳ ಕೊರತೆ, ತಡವಾದ ಬಿತ್ತನೆ, ಹತ್ತಿಯನ್ನು ಸತತವಾಗಿ ಒಂದೇ ಜಮೀನಿನಲ್ಲಿ ಬೆಳೆದಾಗ ಎಲೆಗಳು ಕೆಂಪಾಗಬಹುದು. ಹಾಗೂ ಮಳೆಯಾಶ್ರಿತ ಪ್ರದೇಶದಲ್ಲಿ ಬೆಳೆದಾಗ, ಭೂಮಿಗೆ ಸಾಕಷ್ಟು ಪೋಷಕಾಂಶಗಳನ್ನು ಕೊಟ್ಟ ಸಮಯದಲ್ಲಿ ಮಳೆಯ ಅಭಾವವಾದಾಗ ಪೋಷಕಾಂಶಗಳನ್ನು ಹೀರಿಕೊಳ್ಳುವ ಶಕ್ತಿಯನ್ನು ಸಸ್ಯ ಕಳೆದುಕೊಳ್ಳುತ್ತದೆ.ಹವಾಮಾನದ ವೈಪರಿತ್ಯದಿಂದಾಗಿ ತಾಪಮಾನ ಹೆಚ್ಚಾಗಿ ಹತ್ತಿ ಬೆಳೆಯಲ್ಲಿ ಸಾರಜನಕದ ಪ್ರಮಾಣ ಕಡಿಮೆಯಾಗಿ ದ್ಯುತಿಸಂಶ್ಲೇಷಣೆ ಕ್ರಿಯೆಯಲ್ಲಿ ವ್ಯತ್ಯಯ ಉಂಟಾಗುತ್ತದೆ. ಸಾರಜನಕದ ಪ್ರಮಾಣ ಕಡಿಮೆಯಾದಾಗ ರಂಜಕದ ಪ್ರಮಾಣ ಕೂಡ ಇಳಿಕೆಯಾಗುವುದು ಕಂಡು ಬರುತ್ತದೆ. ಆದ್ದರಿಂದ ಶೇ. 2ರ ಡಿ.ಎ.ಪಿ ದ್ರಾವಣವನ್ನು ಸಿಂಪರಣೆ ಮಾಡಬೇಕು. ಎಕರೆಗೆ 200-300 ಲೀ. ದ್ರಾವಣ ಬೇಕಾಗುತ್ತದೆ. ಎಲೆ ಕೆಂಪಾದರೆ ದ್ಯುತಿಸಂಶ್ಲೇಷಣೆ ಕ್ರಿಯೆಯು ಕಡಿಮೆಯಾಗಿ ಇಳುವರಿಯು ಕಡಿಮೆಯಾಗುತ್ತದೆ.ಪೋಷಕಾಂಶಗಳಾದ ಮೆಗ್ನಿಷಿಯಂ, ಪೊಟ್ಯಾಷಿಯಂ ಕೊರತೆಯಿಂದ ಎಲೆಗಳು ಕೆಂಪಾಗಬಹುದು. ಮಳೆಯಾಶ್ರಿತ ಬೆಳೆಯಲ್ಲಿ ಹೆಚ್ಚು ಮಳೆ ಬಂದಾಗ, ನೀರು ನಿಲ್ಲುವಂತಹ ಪ್ರದೇಶಗಳಲ್ಲಿ ಬೆಳೆಯು ಮೊದಲು ಹಳದಿಯಾಗಿ ನಂತರ ಕೆಂಪಾಗುವುದು. ಮೊದಲು ಮೆಗ್ನಿಷಿಯಂ ಕೊರತೆ ಇರುವುದು ಕಂಡು ಬಂದಲ್ಲಿ ಪ್ರತಿ ಎಕರೆ ಭೂಮಿಗೆ 10 ಕಿ.ಗ್ರಾಂ ಮ್ಯೆಗ್ನಿಷಿಯಂ ಸಲ್ಫೇಟ್‌ನ್ನು ಸೇರಿಸಬೇಕು ಮತ್ತು ಬೆಳೆಯ 3 ಸಂಧಿಗ್ಧ ಹಂತಗಳಾದ ಹೂವಾಡುವ ಹಂತ (60-75 ದಿನಗಳು), ಕಾಯಿ ಕಟ್ಟುವ ಹಂತ (80-95 ದಿನಗಳು) ಕಾಯಿ ಬಲಿಯುವ ಹಂತ (100-110 ದಿನಗಳು) ಗಳಲ್ಲಿ ಶೇ.1 ರ ಮೆಗ್ನಿಷಿಯಂ ಸಲ್ಫೇಟ್ ಜೊತೆಯಲ್ಲಿ ಶೇ.1 ರ 19 :19 :19 (ನೀರಿನಲ್ಲಿ ಕರಗುವ ಗೊಬ್ಬರ, ಒಂದು ಕೆಜಿ ಪ್ಯಾಕೆಟ್ ನಲ್ಲಿ ಲಭ್ಯವಿರುತ್ತದೆ.) ಗಳ ದ್ರಾವಣವನ್ನು ಸಿಂಪರಿಸಬೇಕು.ಒಂದು ವೇಳೆ ದ್ಯುತಿಸಂಶ್ಲೇಷಣೆ ಕ್ರಿಯೆ ಕಡಿಮೆಯಾದರೆ ಬೆಳವಣಿಗೆ ಕುಂಠಿತವಾಗಿ ಮೊಗ್ಗು ಹಾಗೂ ಹೂಗಳಿಗೆ ಆಹಾರ ಸಿಗದೇ ಮೊಗ್ಗು ಮತ್ತು ಕಾಯಿಗಳು ಉದುರುತ್ತವೆ. ಆದ್ದರಿಂದ ಎಲೆ ಕೆಂಪಾಗುವುದು ಕಂಡುಬಂದಾಗ ಶೇ.2ರ ಡಿ.ಎ.ಪಿ ದ್ರಾವಣವನ್ನು ಪ್ರತಿ ಎಕರೆಗೆ 200-300 ಲೀ ಸಿಂಪರಣೆ ಮಾಡುವುದು ಉತ್ತಮ.ಡಿ.ಎ.ಪಿ ದ್ರಾವಣ ತಯಾರಿಕೆ : ಪ್ರತಿ ಲೀ. ನೀರಿಗೆ 20 ಗ್ರಾಂ. ಡಿ.ಎ.ಪಿ ಯನ್ನು ನೀರಿನಲ್ಲಿ ನೆನೆಸಿ ತಯಾರಿಸಿದ ದ್ರಾವಣವನ್ನು 12-18 ಗಂಟೆಗಳ ಕಾಲ ಇರಿಸಿ ನಂತರ ಸಿಂಪರಣೆ ಮಾಡುವುದು ಉತ್ತಮ. ಕೇವಲ ತಿಳಿ ದ್ರಾವಣವನ್ನು ಸಿಂಪರಣೆ ಮಾಡಬೇಕು. ಪ್ರತಿ ಎಕರೆಗೆ 200-300 ಲೀ. ದ್ರಾವಣ ಬೇಕಾಗುತ್ತದೆ. ಆದ್ದರಿಂದ ಆರಂಭಿಕ ಹಂತದಲ್ಲಿಯೇ ಹತೋಟಿ ಕ್ರಮ ಕೈಗೊಂಡರೆ ಗುಣಮಟ್ಟದ ಹತ್ತಿಯನ್ನು ಬೆಳೆಯಬಹುದು ಮತ್ತು ಉತ್ಪಾದನಾ ವೆಚ್ಚವನ್ನು ಕಡಿಮೆ ಮಾಡಬಹುದು. ಹೆಚ್ಚಿನ ಮಾಹಿತಿಗಾಗಿ ಸಮೀಪದ ಹೋಬಳಿ ಮಟ್ಟದ ರೈತ ಸಂಪರ್ಕ ಕೇಂದ್ರಗಳನ್ನು ಸಂಪರ್ಕಿಸಬೇಕೆಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

## ಅಪರಾಧ ಕೃತ್ಯಗಳಲ್ಲಿ ಪಾಲ್ಗೊಂಡರೆ ಕಾನೂನು ಕ್ರಮ: ತಿಮ್ಮಣ್ಣ

» ಹೊಸದುರ್ಗ

ನಮ್ಮ ಪೊಲೀಸ್ ಠಾಣಾ ವ್ಯಾಪ್ತಿಯ ಎಲ್ಲಾ ಕಡೆಗಳಲ್ಲಿ ಕಟ್ಟುನಿಟ್ಟಿನ ನಿಗವಹಿಸಿದ್ದು, ಈಗಾಗಲೇ, ಅಪರಾಧ ಕೃತ್ಯಗಳಲ್ಲಿ ಭಾಗವಹಿಸಿರುವವರ ಚಲನವಲನಗಳನ್ನು ಸೂಕ್ಷ್ಮವಾಗಿ ಗಮನಿಸಲಾಗುತ್ತಿದೆ. ನಿಮ್ಮ ವರ್ತನೆ ಅನುಮಾನಾಸ್ಪದವಾಗಿ ಕಂಡುಬಂದಲ್ಲಿ ಯಾವುದೇ ಮುಲಾಜಿಲ್ಲದೆ ಕಾನೂನು ಕ್ರಮ ತೆಗೆದುಕೊಳ್ಳಲಾಗುವುದು ಎಂದು ಎಂಓಬಿಗಳಿಗೆ ಹೊಸದುರ್ಗ ಪೊಲೀಸ್ ಠಾಣೆಯ ಇನ್ಸ್ಪೆಕ್ಟರ್ ತಿಮ್ಮಣ್ಣ ಖಡಕ್ ಎಚ್ಚರಿಕೆ ನೀಡಿದರು. ಪಟ್ಟಣದ ಪೊಲೀಸ್ ಠಾಣಾ ಆವರಣದಲ್ಲಿ ಸೋಮವಾರ ಎಂಓಬಿಗಳ ಪೀರಿಎಡ್ ನಡೆಸಿ ಮಾತನಾಡಿದ ಅವರು, ಈಗಾಗಲೇ, ಅಪರಾಧ ಕೃತ್ಯಗಳಲ್ಲಿ ಭಾಗಿಯಾಗಿರುವವರು ಮುಂದೆ ಯಾವುದೇ ಕೃತ್ಯಗಳಲ್ಲಿ ಭಾಗವಹಿಸುವಂತಿಲ್ಲ. ನಮ್ಮ ನೈಟ್ ಬೀಟ್ ಪೊಲೀಸ್ ಸಿಬ್ಬಂದಿಗಳು ಪ್ರತಿವಾರಕ್ಕೆ ಒಂದು ದಿನ ನಿಮ್ಮ ಮನಗಳಿಗೆ ಬಂದು ನಿಮ್ಮನ್ನು ಪರಿಶೀಲಿಸಲಿದ್ದಾರೆ. ಅಪರಾಧ ಕೃತಿಗಳಿಂದ ದೂರವಾಗಿದ್ದು, ನಿಮ್ಮಲ್ಲಿ ಸುಧಾರಣೆಯಾಗಿದ್ದರೆ, ಎಂಓಬಿ ಪಟ್ಟಿಯಿಂದ ತೆಗೆಯುತ್ತೇವೆ. ಮುಂದೆಯೂ ಇಂಥಹ ಪ್ರಕರಣಗಳಲ್ಲಿ ಪಾಲ್ಗೊಳ್ಳುವಂತಿಲ್ಲ. ನಮ್ಮ ಪೊಲೀಸ್ ಠಾಣ



ವ್ಯಾಪ್ತಿಯಲ್ಲಿ 54 ಜನರು ಇದ್ದು, ಪ್ರತಿಯೊಬ್ಬರ ಮೇಲೆಯೂ ಕಣ್ಣಿಡಲಾಗಿದೆ. ನೀವು ಬೇರೆ ಸ್ಥಳಗಳಿಗೆ ಹೋಗುವ ಮುಂಚಿತವಾಗಿ ನಮಗೆ ಮಾಹಿತಿ ತಿಳಿಸಿ ಹೋಗಬೇಕು. ನಿಮಗೆ ಯಾರಾದರೂ ಅನುಮಾನಸ್ಪದವಾಗಿ ಕಂಡು ಬಂದಲ್ಲಿ ನಮಗೆ ಮಾಹಿತಿ ನೀಡಿ ಎಂದು ತಿಳಿಸಿದರು. ಈ ವೇಳೆ ಪೊಲೀಸ್ ಸಬ್ ಇನ್ಸ್ಪೆಕ್ಟರ್ ಮಹೇಶ್ ಕುಮಾರ್ ಮತ್ತು ಭೀಮನಗೌಡ ಪಾಟೀಲ್ ಸೇರಿದಂತೆ ಪೊಲೀಸ್ ಇಲಾಖೆ ಸಿಬ್ಬಂದಿಗಳಿದ್ದರು.

---

**ಪ್ರಮುಖ ಸುದ್ದಿ**

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ.ತಾಜ್‌ಪೀರ್

# ಉದ್ಯಾನಗಳಲ್ಲಿ ಓಪನ್ ಜಿಮ್, ಯೋಗ ಪ್ಲಾಟ್‌ಫಾರಂಗೆ ಚಿಂತನೆ





» ಚಿತ್ರದುರ್ಗ

ಚಿತ್ರದುರ್ಗ ನಗರದ ಎಲ್ಲಾ ಉದ್ಯಾನವನಗಳಲ್ಲಿ ಓಪನ್ ಜಿಮ್ ಮತ್ತು ಯೋಗದ ಪ್ಲಾಟ್‌ಫಾರಂಗಳನ್ನು ರಚಿಸಲು ಉದ್ದೇಶಿಸಲಾಗಿದೆ ಎಂದು ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ.ತಾಜ್‌ಪೀರ್ ಹೇಳಿದರು.

ಇಲ್ಲಿನ ದೊಡ್ಡಪೇಟೆಯ ಶ್ರೀ ವಾಸವಿ ವಿದ್ಯಾಸಂಸ್ಥೆಯಲ್ಲಿ ಭಾನುವಾರ ಪತಂಜಲಿ ಯೋಗ ಸಂಸ್ಥೆಯ ವತಿಯಿಂದ "ನನ್ನ ಯೋಗ ನನ್ನ ಕ್ಷೇಮ" ಎನ್ನುವ ಧ್ಯೇಯದೊಂದಿಗೆ "ಸಹ ಯೋಗ ಶಿಕ್ಷಕರ ತರಬೇತಿ" ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.

ಯೋಗವು ಜಾತಿರಹಿತವಾದದು ಮತ್ತು ಸಮಾಜದ ಎಲ್ಲಾ ವರ್ಗದ ಜನರ ಆರೋಗ್ಯಕ್ಕೆ ಅವಶ್ಯಕವಾಗಿದೆ ಎಂದು ಹೇಳಿದರು. ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಮಾತನಾಡಿ, ಯೋಗವು ಜೀವನದ ಎಲ್ಲಾ ವಿಭಾಗಗಳಲ್ಲಿ ಅವಶ್ಯಕವಾಗಿದೆ ಎಂದರು.

ಉದ್ಯಮಿ ಭರತ್ ಕುಮಾರ್ ಮಾತನಾಡಿ, ಎಲ್ಲರೂ ಯೋಗವನ್ನು ಕಲಿತು ರೋಗ ಮುಕ್ತರಾಗಬೇಕು ಎಂದು ಸಲಹೆ ನೀಡಿದರು. ಈ ಸಂದರ್ಭದಲ್ಲಿ ಪತಂಜಲಿ ಯೋಗ ಸಂಸ್ಥೆಯ ದಕ್ಷಿಣ ಭಾರತದ ಪ್ರಭಾರಿ ಭವರಲಾಲ್ ಆರ್ಯ, ವಾಸವಿ ವಿದ್ಯಾಸಂಸ್ಥೆಯ ಅಧ್ಯಕ್ಷ ಸತ್ಯನಾರಾಯಣ ಶ್ರೇಷ್ಠಿ, ವೈದ್ಯಾಧಿಕಾರಿ ರವಿಕುಮಾರ್, ವ್ಯಾಪಾರಿಗಳಾದ ಲತಾರವಿ, ಪತಂಜಲಿ ಸಂಸ್ಥೆಯ ಚಿತ್ರದುರ್ಗ ಪ್ರಭಾರಿಗಳಾದ ದೇವಾನಂದ ನಾಯ್ಕ್, ಶ್ರೀನಿವಾಸ್, ಗುರುಮೂರ್ತಿ, ಕೆಂಚವೀರಪ್ಪ, ಶ್ರೀರಾಮ್ ನರೇಶ್, ನವೀನ್, ಕೃಷ್ಣಮೂರ್ತಿ ಮತ್ತು ಯೋಗ ಶಿಕ್ಷಕರು ಇದ್ದರು.

# ಭೂಮಿ ಒದಗಿಸುವಂತೆ ರೈತರ ಪ್ರತಿಭಟನೆ

» **ಚಿತ್ರದುರ್ಗ**

ಬಗರ್ ಹುಕುಂ ರೈತರಿಗೆ ಭೂಮಿ, ವಸತಿ ರಹಿತರಿಗೆ ವಸತಿ ಒದಗಿಸುವಂತೆ ಭೂಮಿ ಮತ್ತು ವಸತಿ ಹಕ್ಕು ವಂಚಿತರ ಹೋರಾಟ ಸಮಿತಿಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಸೋಮವಾರ ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಯಿತು.

ಜಿಲ್ಲೆಯಲ್ಲಿ ಲಕ್ಷಾಂತರ ರೈತರು ಬಗರ್‌ಹುಕುಂ ಸಾಗುವಳಿ ಮಾಡುತ್ತಿದ್ದು, ಅರಣ್ಯ, ಗೋಮಾಳ, ಹುಲ್ಲುಬನ್ನಿ, ಸೇಂದಿ ವನ ಇನ್ನಿತರೆ ಭೂಮಿಗಳಲ್ಲಿ ಜೀವನೋಪಾಯಕ್ಕಾಗಿ ಉಳುಮೆ ಮಾಡುತ್ತ ಭೂಮಿಯ ಹಕ್ಕಿಗಾಗಿ ಅರ್ಜಿ ಸಲ್ಲಿಸಿ ಕಾಯುತ್ತಿದ್ದಾರೆ. ಶಾಸಕರ ಅಧ್ಯಕ್ಷತೆಯಲ್ಲಿ ಭೂ ಮಂಜೂರಾತಿ ಸಮಿತಿಗಳು ರಚನೆಯಾಗಿದ್ದರೂ ಕಾಲ ಕಾಲಕ್ಕೆ ಸಭೆ ನಡೆಯುತ್ತಿಲ್ಲ. ಹಾಗಾಗಿ ಅಧಿಕಾರಿಗಳು ಹೋರಾಟ ಸಮಿತಿಯ ಮುಖಂಡರುಗಳನ್ನೊಳಗೊಂಡಂತೆ ಜಿಲ್ಲಾ ಮಟ್ಟದ ಸಭೆ ನಡೆಸಿ ಭೂಮಿಗೆ ಸಂಬಂಧಿಸಿದ ಗೊಂದಲ ಪರಿಹರಿಸಬೇಕೆಂದು ಪ್ರತಿಭಟನಾನಿರತರು ಜಿಲ್ಲಾಧಿಕಾರಿಯನ್ನು ಒತ್ತಾಯಿಸಿದರು.



ಭೂಮಿ ಸಾಗುವಳಿ ಮಾಡುತ್ತಿರುವವರು ಸಲ್ಲಿಸಿರುವ ಅರ್ಜಿಗಳನ್ನು ತಿರಸ್ಕರಿಸದೆ ಬಡವರಿಗೆ ನ್ಯಾಯ ನೀಡುವ ನಿಟ್ಟಿನಲ್ಲಿ ಪಾರದರ್ಶಕವಾಗಿ ತೀರ್ಮಾನವಾಗಬೇಕು.

ಅರಣ್ಯ ಭೂಮಿ ಕಂದಾಯ ಭೂಮಿಯ ಗೊಂದಲಗಳಿದ್ದು, ಜಂಟಿ ಸರ್ವೆ ಮೂಲಕ ಸರಿಪಡಿಸಿ ಯಾರನ್ನು ಒಕ್ಕಲೆಬ್ಬಿಸಬಾರದು.

ನಗರ ಮಿತಿಯ ನೆಪದಲ್ಲಿ ಬಗರ್ ಹುಕುಂ ಸಾಗುವಳಿದಾರರಿಗೆ ಭೂಮಿ ಮಂಜೂರಾತಿ ನೀಡದೆ ವಂಚಿಸಲಾಗುತ್ತಿದೆ. ಸರ್ಕಾರ ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿ ಒನ್ ಟೈಮ್ ಸೆಟ್ಲ್‌ಮೆಂಟ್ ಜಾರಿಗೊಳಿಸಿ ಆಗುತ್ತಿರುವ ಅನ್ಯಾಯವನ್ನು ಸರಿಪಡಿಸಬೇಕು.

94 ಸಿ ಮತ್ತು 94 ಸಿಸಿ. ಅಡಿಯಲ್ಲಿ ವಸತಿಗಾಗಿ ಸಲ್ಲಿಸಿರುವ ಅರ್ಜಿಗಳನ್ನು ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು. ಭೂಮಿ ಸಾಗುವಳಿ ಮಾಡುತ್ತ ಫಾರಂ ನಂ.50, 53

57 ರಲ್ಲಿ ಅರ್ಜಿ ಸಲ್ಲಿಸಿರುವವರಿಗೆ ಭೂಮಿ ಮಂಜೂರಾತಿ ಕೊಡಬೇಕೆಂದು ಆಗ್ರಹಿಸಿದರು.

ಭೂಮಿ ಮತ್ತು ವಸತಿ ಹಕ್ಕು ವಂಚಿತರ ಹೋರಾಟ ಸಮಿತಿ ಜಿಲ್ಲಾಧ್ಯಕ್ಷ ಸತ್ಯಪ್ಪ ಮಲ್ಲಾಪುರ, ಸದಸ್ಯ ಕುಮಾರ್ ಸಮತಳ, ಕಾರ್ಯದರ್ಶಿ ಹನುಮಂತಣ್ಣ, ಈರಜ್ಜ, ಕರಿಯಣ್ಣ, ಸುನಂದಮ್ಮ, ವೆಂಕಟೇಶ್, ನಾಗಣ್ಣ, ಚಂದ್ರಣ್ಣ, ಪುರುಷೋತ್ತಮ್, ವಿಜಯಮ್ಮ, ಕೆ.ಬಿ.ನಾಗರಾಜ್, ರಾಮಚಂದ್ರಪ್ಪ, ಕೆಂಚಪ್ಪ, ರಮೇಶಪ್ಪ, ನೆಲ್ಲಿಕಟ್ಟೆ ಗೌರಮ್ಮ, ಎಂ.ಟಿ.ರಂಗನಾಥ್, ತಿಮ್ಮಣ್ಣ, ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ರಾಮಚಂದ್ರಪ್ಪ ಸೇರಿದಂತೆ ನೂರಾರು ಮಂದಿ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

### ರೋಗಿಗಳನ್ನು ಪ್ರಾಣಾಪಾಯದಿಂದ ಪಾರು ಮಾಡುವ ದಿವ್ಯಶಕ್ತಿ ರಕ್ತದಲ್ಲಿ ಅಡಗಿದೆ

## ರಕ್ತದಾನದ ಮೂಲಕ ಜೀವಗಳ ಸಂರಕ್ಷಣೆಗೆ ಮುಂದಾಗಬೇಕು: ಆನಂದಕುಮಾರ್

» **ಚಳ್ಳಕೆರೆ**

ಪ್ರತಿಯೊಬ್ಬ ವ್ಯಕ್ತಿಯೂ ತನ್ನ ಕುಟುಂಬದ ಸದಸ್ಯರ ಆರೋಗ್ಯದ ಬಗ್ಗೆ ಹೆಚ್ಚು ಗಮನ ನೀಡುವ ಜೊತೆಗೆ ಸಮಾಜದಲ್ಲೂ ಸಹ ಎಲ್ಲರ ಆರೋಗ್ಯದ ಬಗ್ಗೆಯೂ ಸಹ ಗಮನಹರಿಸಬೇಕಾಗುತ್ತದೆ. ಅನೇಕ ಸಂದರ್ಭಗಳಲ್ಲಿ ನಮ್ಮ ಶರೀರದಲ್ಲಿ ರಕ್ತಸಂಚಾರ ವ್ಯತ್ಯಯವಾದರೆ ಅಥವಾ ರಕ್ತದ ಅಂಶ ಕಡಿಮೆಯಾದರೆ ಪ್ರಾಣಕ್ಕೆ ಅಪಾಯವಾಗುವುದು. ಆದ್ದರಿಂದ ರಕ್ತದಾನದ ಮೂಲಕ ಬೇರೆಯವರ ಜೀವವನ್ನು ಉಳಿಸುವ ಮಹತ್ಕಾರ್ಯಕ್ಕೆ ನಾವೆಲ್ಲರೂ ನೆರವಾಗಬೇಕೆಂದು ಚನ್ನಮ್ಮನಾಗತಿಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಬಿ.ಆನಂದಕುಮಾರ್ ತಿಳಿಸಿದರು.

ಅವರು, ಸೋಮವಾರ ಗ್ರಾಮದ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸ್ವಯಂಪ್ರೇರಿತ ರಕ್ತದಾನ ಶಿಬಿರದಲ್ಲಿ ಭಾಗವಹಿಸಿ, ತಾವು ಸಹ ರಕ್ತದಾನ ಮಾಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ವೈದ್ಯಾಧಿಕಾರಿ ಡಾ.ಮಂಜುನಾಥ ಪ್ರಾಸ್ತಾವಿಕವಾಗಿ ಮಾತನಾಡಿ, ಅನೇಕ ಅಮೂಲ್ಯವಾದ ದಾನಗಳಲ್ಲಿ ರಕ್ತದಾನವೂ ಸಹ ಒಂದಾಗಿದೆ. ಗ್ರಾಮದ ಈ ಆಸ್ಪತ್ರೆಯಲ್ಲಿ ಸ್ವಯಂಪ್ರೇರಿತ ರಕ್ತದಾನ ಶಿಬಿರವನ್ನು ಏರ್ಪಡಿಸುವ ಮೂಲ ಉದ್ದೇಶ ಹೆಚ್ಚು, ಹೆಚ್ಚು ರಕ್ತ ಸಂಗ್ರಹಿಸಿದರೆ ಮಾತ್ರ ಪ್ರಾಣಾಪಾಯವನ್ನು ಎದುರಿಸುವ ರೋಗಿಗಳಿಗೆ ಮರುಜೀವ ನೀಡಬಹುದಾಗಿದೆ. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ನಿಯಂತ್ರಣ ಘಟಕ, ತಾಲ್ಲೂಕು ಆರೋಗ್ಯಾಧಿಕಾರಿಗಳ ಸಹಯೋಗದಲ್ಲಿ ಈ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ ಎಂದರು.



ವೈದ್ಯಾಧಿಕಾರಿ ಡಾ.ರಘುನಂದನ್ ಮಾತನಾಡಿ, ಇಂದಿನ ಸ್ವಯಂಪ್ರೇರಿತ ರಕ್ತದಾನ ಶಿಬಿರದಲ್ಲಿ ಸುಮಾರು 40ಕ್ಕೂ ಹೆಚ್ಚು ಜನರು ರಕ್ತವನ್ನು ದಾನರೂಪದಲ್ಲಿ ನೀಡಿದ್ದಾರೆ. ರಕ್ತದಾನ ಮಾಡಿದ ಎಲ್ಲರಿಗೂ ಆರೋಗ್ಯ ಇಲಾಖೆಪರವಾಗಿ ಅಭಿನಂದಿಸುವೆ. ರಕ್ತದಾನ ಶಿಬಿರದ ಬಗ್ಗೆ ತಾವೆಲ್ಲರೂ ಹೊಂದಿರುವ ವಿಶ್ವಾಸ ಗೌರವವನ್ನು ನಾನು ಗೌರವಿಸುವೆ. ಮುಂದಿನ ದಿನಗಳಲ್ಲೂ ಸಹ ಇದೇ ರೀತಿ ಸಹಕಾರ ನೀಡುವಂತೆ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಪಂಚಾಯಿತಿ ಸದಸ್ಯರಾದ ತಿಪ್ಪೇಸ್ವಾಮಿ, ರಾಜಣ್ಣ, ದಳಪತಿಭೀಮಪ್ಪ, ಪಿಡಿಒ ಕೊರ್ಲಯ್ಯ, ಆರೋಗ್ಯ ನಿರೀಕ್ಷಣಾಧಿಕಾರಿ ಲೋಕನಾಥ, ಕರಿಯಣ್ಣ, ಜಿಲ್ಲಾ ರಕ್ತಕೇಂದ್ರದ ಅಧಿಕಾರಿ ಡಾ.ರೂಪ ಮುಂತಾದವರು ಪಾಲ್ಗೊಂಡಿದ್ದರು.

## ಪದವಿ ಜೊತೆ ಕೌಶಾಲ್ಯಾಧಾರಿತ ಶಿಕ್ಷಣ ಕಲಿಯುವಂತೆ ವಿದ್ಯಾರ್ಥಿಗಳಿಗೆ ಸಂಸದ ಕಾರಜೋಳ ಕರೆ



» **ಚಿತ್ರದುರ್ಗ**

ಸ್ಪರ್ಧಾತ್ಮಕ ಯುಗದಲ್ಲಿ ಒಂದೊಂದು ಅಂಕಕ್ಕೂ ಪ್ರಾಮುಖ್ಯತೆಯಿರುವುದರಿಂದ ಕಠಿಣ ಪರಿಶ್ರಮ ಹಾಗೂ ಶ್ರದ್ದೆಯಿಂದ ಓದಿದಾಗ ಮಾತ್ರ ಹೆಚ್ಚಿನ ಅಂಕಗಳನ್ನು ಗಳಿಸಲು ಸಾಧ್ಯ ಎಂದು ಸಂಸದ ಗೋವಿಂದ ಕಾರಜೋಳ ವಿದ್ಯಾರ್ಥಿಗಳಿಗೆ ಕರೆ ನೀಡಿದರು.ದಾವಣಗೆರೆ ವಿಶ್ವವಿದ್ಯಾನಿಲಯ, ಬಾಪೂಜಿ ಸಮೂಹ ಸಂಸ್ಥೆ, ಕೆ.ಎಂ.ಎಸ್. ಪ್ರಥಮ ದರ್ಜೆ ಕಾಲೇಜಿನಲ್ಲಿ ಅಂತಿಮ ಪದವಿ ವಿದ್ಯಾರ್ಥಿಗಳಿಗೆ ಇತ್ತೀಚೆಗೆ ಹಮ್ಮಿಕೊಳ್ಳಲಾಗಿದ್ದ ಪದವಿ ಪ್ರದಾನ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ಪದವಿ ಪಡೆಯುವುದು ಮುಖ್ಯವಲ್ಲ. ಸ್ಪರ್ಧಾತ್ಮಕ ಯುಗಕ್ಕೆ ವಿದ್ಯಾರ್ಥಿಗಳು ಅಣಿಯಾಗಬೇಕು. ರಾಷ್ಟ್ರೀಯ ಶಿಕ್ಷಣಕ್ಕೆ ಮಹತ್ವವಿದೆ. ಬಾಪೂಜಿ ಸಮೂಹ ಶಿಕ್ಷಣ ಸಂಸ್ಥೆಯಲ್ಲಿ ಎಲ್ಲಾ ಸಮಾಜದ ವಿದ್ಯಾರ್ಥಿಗಳಿಗೆ ಸಮಾನವಾದ ಶಿಕ್ಷಣ ನೀಡುತ್ತಿರುವುದು ಸಂತೋಷದ ಸಂಗತಿ. ಅದರಲ್ಲೂ ಬಡ ವಿದ್ಯಾರ್ಥಿಗಳಿಗೆ ಒತ್ತು ಕೊಡುತ್ತಿರುವುದನ್ನು ನೋಡಿದರೆ ಸಂಸ್ಥೆಯವರಿಗೆ ಬಡ ಮಕ್ಕಳ ಭವಿಷ್ಯದ ಬಗ್ಗೆ ಕಾಳಜಿಯಿರುವುದನ್ನು ತೋರಿಸುತ್ತದೆ ಎಂದು ಹೇಳಿದರು.

ಬಾಪೂಜಿ ಸಮೂಹ ಶಿಕ್ಷಣ ಸಂಸ್ಥೆ ಕಾರ್ಯದರ್ಶಿ ಕೆ.ಎಂ.ವೀರೇಶ್ ಮಾತನಾಡಿ ವಿದ್ಯಾರ್ಥಿಗಳು ಶಿಕ್ಷಣದ ಕಡೆ ಹೆಚ್ಚಿನ ಗಮನ ಕೊಟ್ಟು ಪದವಿ ಪಡೆದುಕೊಂಡರೆ ಸಮಾಜದಲ್ಲಿ ಸತ್ಪ್ರಜೆಗಳಾಗಿ ಬದುಕಿ ಗುರು–ಹಿರಿಯರು, ಪೋಷಕರುಗಳಿಗೆ ಕೀರ್ತಿ ತರಬಹುದೆಂದರು.

## ಹೊಳಲ್ಕೆರೆ ಈಶ್ವರಿ ವಿಶ್ವವಿದ್ಯಾನಿಲಯದಲ್ಲಿ ಪತ್ರಿಕಾ ದಿನಾಚರಣೆ, ಸನ್ಮಾನ

» **ಹೊಳಲ್ಕೆರೆ**

ಉದಾರ ಹೃದಯ, ಮೃದು ಮಾತು, ಕರುಣೆ ಮತ್ತು ಸೇವಾ ಜೀವನ ಮನುಷ್ಯತ್ವಕ್ಕೆ ಚೈತನ್ಯ ನೀಡಿದಂತೆ ಪತ್ರಿಕೆಗಳು ನಿತ್ಯ ಸಮಾಜದ ಚೈತನ್ಯ ಶಕ್ತಿಗಳಾಗಿವೆ ಎಂದು ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿ ವಿಶ್ವವಿದ್ಯಾನಿಲಯದ ಸಂಚಾಲಕಿ ಬಿ.ಕೆ ಸುಮಿತ್ರಕ್ಕ ಅಭಿಪ್ರಾಯ ವ್ಯಕ್ತಪಡಿಸಿದರು.

ಪಟ್ಟಣದ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿ ವಿಶ್ವವಿದ್ಯಾನಿಲಯದ ಆವರಣದಲ್ಲಿ ಭಾನುವಾರ ಕೈಗೊಂಡಿದ್ದ ಪತ್ರಿಕಾ ದಿನಾಚರಣೆ ಜತೆ ಪತ್ರಕರ್ತರಿಗೆ ಸನ್ಮಾನಿಸಿ ಮಾತನಾಡಿದರು.



ಪ್ರಜಾಪ್ರಭುತ್ವದ ಕಾವಲುಗಾರನಂತೆ ವೃತ್ತಿ ಕಟ್ಟಿಕೊಳ್ಳುವ ಪತ್ರಕರ್ತರು, ಸಮಾಜದಲ್ಲಿ ನಡೆಯುವ ಶೋಷಣೆ, ಸಾಮಾಜಿಕ ಅನ್ಯಾಯ, ದೌರ್ಜನ್ಯ, ಅಸಹನೆ, ಅತ್ಯಾಚಾರಗಳ ವಿರುದ್ಧ ಧ್ವನಿ ಎತ್ತಬೇಕು. ನೊಂದ ಪ್ರತಿಯೊಬ್ಬ ವ್ಯಕ್ತಿಗೂ ನ್ಯಾಯ ಕೊಡಿಸುವಂತಹ ಲೇಖನಗಳನ್ನು ಪತ್ರಿಕೆಯಲ್ಲಿ ಪ್ರಸಾರ ಮಾಡಿ ಜನಸಮುದಾಯದ ಧ್ವನಿ ಆಗಬೇಕು. ಪತ್ರಿಕೆಗಳು ಜನರ ಧ್ವನಿಯಂತೆ ಕೆಲಸ ಮಾಡಿದಾಗ ಪ್ರಜಾಪ್ರಭುತ್ವದ ಮೌಲ್ಯಗಳಿಗೆ ಹೆಚ್ಚು ಮಾನ್ಯತೆ ಸಿಗುತ್ತದೆ. ಪತ್ರಿಕೆ ಮತ್ತು ದೃಶ್ಯಮಾಧ್ಯಮಗಳಲ್ಲಿ ಕರ್ತವ್ಯ ನಿರ್ವಹಿಸುವ ಪ್ರತಿಯೊಬ್ಬರು ಸಮಾಜದ ಕಲ್ಯಾಣಕ್ಕೆ ನಿತ್ಯ ನಿರಂತರ ಹೋರಾಟ ಕೈಗೊಳ್ಳುವ ಹೊಣೆಗಾರಿಕೆ ಇಟ್ಟುಕೊಂಡಿರುವುದು ಶ್ಲಾಘನೀಯರ ಎಂದರು. ತಾ.ಪಂ.ಮಾಜಿ ಅಧ್ಯಕ್ಷ ಎಸ್. ಆರ್.ಮೋಹನ್ ನಾಗರಾಜ್ ಮಾತನಾಡಿ, ಸಮಾಜದವನ್ನು ಬಡಿದಬ್ಬಿಸುವ ಕೆಲಸ ಪತ್ರಿಕೆಗಳು ಮಾಡುತ್ತಿವೆ. ಸರಕಾರ ಮತ್ತು ಸಮಾಜದಲ್ಲಿ ನಡೆಯುತ್ತಿರುವ ಭ್ರಷ್ಟಾಚಾರ ಮಟ್ಟಹಾಕಲು ಸತ್ಯ ಸಂದೇಶ ಬಿತ್ತರಿಸಬೇಕೆಂದರು.

ವಕೀಲರಾದ ಎಸ್. ವೇದಮೂರ್ತಿ ಮಾತನಾಡಿ, ಮಾಧ್ಯಮಗಳು ಜನ ಮಾನಸದ ಧ್ವನಿಯಾಗಿ ಕರ್ತವ್ಯ ನಿರ್ವಹಿಸುತ್ತಿವೆ. ಸಮಾಜದ ಕಟ್ಟ ಕಡೆಯ ವ್ಯಕ್ತಿಗೂ ನ್ಯಾಯ ಕಲ್ಪಿಸಿ ಕೊಡುವ ನಿಟ್ಟಿನಲ್ಲಿ ಸರ್ಕಾರವನ್ನು ಎಚ್ಚರಿಸುವಂತಹ ಕೆಲಸ ಮಾಡುತ್ತೇವೆ. ಸಂವಿಧಾನದ ಆಶಯಗಳನ್ನು ಈಡೇರಿಸಲು ಪತ್ರಿಕೆಗಳು ನಿರಂತರವಾಗಿ ಹೋರಾಟ ನಡೆಸುತ್ತಿವೆ ಎಂದು ತಿಳಿಸಿದರು.

**ಪ್ರಮುಖ ಸುದ್ದಿ**

# ವೈದ್ಯೋತ್ಸವ ಹಾಗೂ ಸಾಧಕರಿಗೆ ಸನ್ಮಾನ ಸಮಾರಂಭ

» **ಚಿತ್ರದುರ್ಗ**

ಕೌಟುಂಬಿಕ,ಸಾಮಾಜಿಕ,ಭಾವನಾತ್ಮಕವಾಗಿ ಯಾರು ಬಲಿಷ್ಠರಾಗಿರುತ್ತಾರೋ ಅಂತಹವರು ಮಾತ್ರ ಜೀವನದಲ್ಲಿ ಯಶಸ್ಸಿನ ಮೆಟ್ಟಿಲು ಏರಬಲ್ಲರು ಎಂದು ಡಾ.ನವೀನ್ ಬಿ.ಸಜ್ಜನ್ ಹೇಳಿದರು.

ರೋಟರಿ ಕ್ಲಬ್ ಮತ್ತು ಪ್ರಥಮ್ ಶಿಕ್ಷಣ ಹಾಗೂ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಸಹಯೋಗದಲ್ಲಿ ರೋಟರಿ ಬಾಲಭವನದಲ್ಲಿ ಭಾನುವಾರ ಹಮ್ಮಿಕೊಳ್ಳಲಾಗಿದ್ದ ವೈದ್ಯೋತ್ಸವ ಹಾಗೂ ಸಾಧಕರಿಗೆ ಸನ್ಮಾನ ಸಮಾರಂಭ ಉದ್ಘಾಟಿಸಿ ಮಾತನಾಡಿದರು. ಪ್ರತಿಯೊಬ್ಬರಿಗೂ ಜೀವನದಲ್ಲಿ ಯಶಸ್ವಿಯಾಗಬೇಕೆಂಬ ಆಸೆ ಇರುತ್ತದೆ. ಆತ್ಮವಿಶ್ವಾಸದೊಂದಿಗೆ ಎಂತಹ ಸನ್ನಿವೇಶ, ಸವಾಲುಗಳನ್ನು ಎದುರಿಸುವಷ್ಟು ಸಾಮರ್ಥ್ಯ ವಿಶ್ವಾಸವುಳ್ಳವರು ಯಶಸ್ವಿಯಾಗುತ್ತಾರೆ. ಅಂತಹವರನ್ನು ಗುರುತಿಸಿ ಸನ್ಮಾನಿಸಿದರೆ ಇತರೆಯವರಿಗೆ ಪ್ರೇರಣೆ ನೀಡಿದಂತಾಗುತ್ತದೆ ಎಂದರು.

ಮುಖ್ಯ ಅತಿಥಿಗಳಾಗಿ ಮಾತನಾಡಿದ ಡಾ.ಮಹೇಶ್ ನಮ್ಮ ಸುತ್ತಮುತ್ತಲು ಅನೇಕ ಸಾಧಕರುಗಳು ತೆರೆಮರೆಯಲ್ಲಿ ಕೆಲಸ ಮಾಡುತ್ತಿರುತ್ತಾರೆ. ಸಮಾಜದಲ್ಲಿ ಸಾಧನೆ ಮಾಡಿರುವ ನಿವೃತ್ತ ಯೋಧರು, ವೈದ್ಯರು, ಶುಶ್ರೂಷಕರು, ವೃತ್ತಿ ನಿರತರು, ಕವಿಗಳನ್ನು ಗುರುತಿಸಿ ಗೌರವಿಸಿ ಸಮಾಜಕ್ಕೆ ಸಾಧಕರ ಯಶೋಗಾಥೆಯನ್ನು ಪರಿಚಯಿಸುತ್ತಿರುವ ಪ್ರಥಮ್ ಶಿಕ್ಷಣ ಸಂಸ್ಥೆಯ ಕಾರ್ಯ ಶ್ಲಾಘನೀಯವೆಂದರು.



ಡಾ.ಬಿ.ಟಿ.ಲೋಲಾಕ್ಷಮ್ಮ ಮಾತನಾಡುತ್ತ ಯಶಸ್ಸು ಸಾಧಕರ ಸ್ವತ್ತೆ ಹೊರತು ಸೋಮಾರಿಯ ಸ್ವತ್ತಲ್ಲ. ರೋಗಿಗಳ ಪ್ರಾಣ ಉಳಿಸುವಲ್ಲಿ ಹಗಲು ರಾತ್ರಿ ಎನ್ನದೆ ಸೇವೆ ಸಲ್ಲಿಸುವ ವೈದ್ಯರು, ನರ್ಸ್‌ಗಳ ಪಾತ್ರ ಸಮಾಜದಲ್ಲಿ ಅಮೂಲ್ಯವಾದುದು. ಅಂತಹ ಸಾಧಕರನ್ನು ಗುರುತಿಸಿ ಸನ್ಮಾನಿಸುತ್ತಿರುವುದು ನಿಜಕ್ಕೂ ಸುತ್ತ್ಯಾರ್ಹ ಎಂದು ಗುಣಗಾನ ಮಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ರೋಟರಿ ಕ್ಲಬ್ ಚಿನ್ಮುಲಾದ್ರಿ ಅಧ್ಯಕ್ಷರಾದ ರೊ.ಮಂಜುನಾಥ್ ಭಾಗವತ್ ಮಾತನಾಡಿ ರೋಟರಿ ಸಂಸ್ಥೆ ಮೊದಲಿನಿಂದಲೂ ಸಮಾಜಮುಖಿಯಾಗಿ ಕೆಲಸ ಮಾಡುತ್ತಿದ್ದು, ಪ್ರತಿಭೆಗಳನ್ನು ಹೆಕ್ಕಿ ಹೊರತೆಗೆಯುವಲ್ಲಿ ಮುಂಚೂಣಿಯಲ್ಲಿದೆ ಎಂದು ಸಂತಸ ವ್ಯಕ್ತಪಡಿಸಿದರು.ಪ್ರಥಮ್ ಶಿಕ್ಷಣ ಹಾಗೂ ಗ್ರಾಮೀಣಾಭಿವೃದ್ಧಿ ಸಂಸ್ಥೆ ಮಹಾನ್ ಸಾಧಕರನ್ನು ಸಮಾಜಕ್ಕೆ ಪರಿಚಯಿಸುತ್ತಿದೆ ಎಂದು ಹೇಳಿದರು. ನಿವೃತ್ತ ಸೈನಿಕ ಜಯಣ್ಣ ಮಾತನಾಡುತ್ತ ನಿಸ್ವಾರ್ಥವಾಗಿ ಸಮಾಜಕ್ಕೆ ದುಡಿಯುವವರನ್ನು ಗುರುತಿಸಿ ಸನ್ಮಾನಿಸುವುದು ಉತ್ತಮ ಬೆಳವಣಿಗೆ ಇಂತಹ ಸಂಸ್ಥೆಗಳಿಗೆ ಬೇರೆಯವರು ಕೈಜೋಡಿಸಬೇಕೆಂದು ಮನವಿ ಮಾಡಿದರು. ಡಾ.ಮನೋಜ್, ಡಾ.ಸಿದ್ದಲಿಂಗಪ್ಪ, ಡಾ.ಅಫ್ರಿದಿ, ಡಾ.ರಶ್ಮಿ ಇವರುಗಳಿಗೆ ವೈದ್ಯ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ವೈದ್ಯಕೀಯ ಕ್ಷೇತ್ರದ 30 ಮಂದಿ ಸಾಧಕರಿಗೆ ಸೇವಾ ರತ್ನ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.ಗುರುಮೂರ್ತಿ, ಪ್ರಥಮ್ ಶಿಕ್ಷಣ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆ ಅಧ್ಯಕ್ಷ ನಂಜುಂಡೇಶ್ವರ, ಖಜಾಂಚಿ ಸುಮ, ಬೆಸ್ಕಾಂ ಗುತ್ತಿಗೆದಾರ ಪ್ರಸನ್ನ, ಕೊಪ್ಪಳದ ಶಶಿಧರ್ ಹಾಗೂ ಸಂಸ್ಥೆಯ ಪದಾಧಿಕಾರಿಗಳಾದ ಚಂದ್ರಿಕ, ಅನಿತ, ದೀಪಿಕಾ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

**ಫಾಸ್ಟ್ ನ್ಯೂಸ್**

## ಕೆ.ಕೆ.ಹಟ್ಟಿ ಮತ್ತುಎಂ.ಜಿ.ದಿಬ್ಬ ಗ್ರಾಮಗಳಲ್ಲಿ ತರಬೇತಿ ಹಾಗೂ ಪರಿಕರ ವಿತರಣೆ



» **ಹೊಸದುರ್ಗ**

2024–25ನೇ ಸಾಲಿನ ಆಹಾರ ಮತ್ತು ಪೋಷ್ಟಿಕ ಭದ್ರತಯೋಜನೆಯಡಿತಾಲ್ಲೂಕಿನ ಕಸಬಾ ಹೋಬಳಿಯ ಕೆ.ಕೆ.ಹಟ್ಟಿ ಮತ್ತುಎಂ.ಜಿ.ದಿಬ್ಬ ಗ್ರಾಮಗಳಲ್ಲಿ ರಾಗಿ, ಸಾವೆ ಬೆಳೆ ಪ್ರಾತ್ಯಕ್ಷಿಕೆ ಕೈಗೊಳ್ಳುತ್ತಿರುವ ಪ್ರಯುಕ್ತ ಶಾಸಕ ಬಿ.ಜಿ.ಗೋವಿದಪ್ಪರವರಅಧ್ಯಕ್ಷತೆಯಲ್ಲಿತರಬೇತಿ ಹಾಗೂ ಪರಿಕರ ವಿತರಣೆಯನ್ನು ಮಾಡಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದಅವರುಕೃಷಿಯಲ್ಲಿ ಸುಧಾರಿತತಾಂತ್ರಿಕತೆಗಳುಹಾಗೂಸುಧಾರಿತತಳಿಗಳ ಬಳಕೆಯಿಂದ ರೈತರು ಕೃಷಿ ಉತ್ಪಾದನೆಯನ್ನು ಹೆಚ್ಚಿಸಬಹುದೆಂದು ತಿಳಿಸಿದರು. ಹಾಗೂ ಸಿರಿಧಾನ್ಯಗಳು ಉತ್ತಮ ಪೌಷ್ಠಿಕಾಂಶವುಳ್ಳ ಆಹಾರ ಧಾನ್ಯಗಳಾಗಿದ್ದು ಜಾಗತಿಕ ಮಟ್ಟದಲ್ಲಿಉತ್ತಮ ಬೇಡಿಕೆಇರುವುದರಿಂದರೈತರು ಸಿರಿಧಾನ್ಯಗಳನ್ನು ಬೆಳೆಯುವುದಷ್ಟೇಯಲ್ಲದೇ ಸಂಸ್ಕರಣೆ ಹಾಗೂಮೌಲ್ಯವರ್ಧನೆ ಮಾಡುವುದರಿಂದ ಹೆಚ್ಚಿನ ಲಾಭ ಪಡೆಯಬಹುದು. ಹಾಗೂ ಸಿರಿಧಾನ್ಯಗಳು ಹೆಚ್ಚಿನ ಪೌಷ್ಠಿಕಾಂಶವುಳ್ಳ ಆಹಾರಆಗುವುದರಿಂದರೈತರು ಸಿರಿಧಾನ್ಯಗಳನ್ನು ಬೆಳೆಯುವುದಷ್ಟೇಯಲ್ಲದೇ ಸ್ವತ: ತಾವುಕೂಡ ಬಳಸುವುದರಿಂದ ಉತ್ತಮಆರೋಗ್ಯ ಪಡೆಯಬಹುದೆಂದು ತಿಳಿಸಿದರು.

ಸಹಾಯಕ ಕೃಷಿ ನಿರ್ದೇಶಕರವರಾದ ಈಶ ಸಿರಿಧಾನ್ಯಗಳು ಪೋಷ್ಠಿಕಾಂಶಗಳ ಆಗರವಾಗಿದ್ದು, ಅತೀಕಡಿಮೆ ಮಳೆ ಹಾಗೂ ಫಲವತ್ತತೆಯಲ್ಲಿಯು ಸಹ ಬೆಳೆಯುತ್ತದೆ ಈ ಸಿರಿಧಾನ್ಯಗಳ ಬಳಕೆಯಿಂದ ಉತ್ತಮಆರೋಗ್ಯವನ್ನು ಪಡೆಯಬಹುದೆಂದು ತಿಳಿಸಿದರು. ಹಾಗೂ ಕೃಷಿ ಇಲಾಖೆಯಲ್ಲಿದೊರೆಯುವಎಲ್ಲಾ ಸೌಲಭ್ಯಗಳ ಬಗ್ಗೆ ಮಾಹಿತಿ ನೀಡಿದರು. ರೈತರು ಸಮಗ್ರ ಕೃಷಿ ಹಾಗೂ ಸಾವಯವಕೃಷಿಯನ್ನು ಅವಲಂಬಿಸುವುದರಿಂದ ಸುಸ್ಥಿರ ಆಧಾಯವನ್ನು ಪಡೆದುಕೊಳ್ಳಬಹುದೆಂದು ತಿಳಿಸಿದರು. ಕಾರ್ಯಕ್ರಮದಅಧ್ಯಕ್ಷತೆಯನ್ನ ಬೋಕಿಕೆರೆಗ್ರಾಮ ಪಂಚಾಯಿತಿಅಧ್ಯ ಶ್ರೀಮತಿ ಗಂಗಮ್ಮ ವಹಿಸಿಕೊಂಡಿ.ಕಾರ್ಯಕ್ರಮದಲ್ಲಿ ಬೋಕಿಕೆರೆ ಗಾಮ ಪಂಚಾಯಿತಿ ಸದಸ್ಯರಾದ ಶ್ರೀಮತಿ ರೇಖಾ,ವಿರುಪಾಕ್ಷಪ್ಪ, ಶ್ರೀಮತಿ ಮೀನಾಕ್ಷಮ್ಮಮಾಜಿತಾಲ್ಲೂಕು ಪಂಚಾಯಿತಿ ಸದಸ್ಯದಕ್ಷಿಣಮೂರ್ತಿ,ಕಸಬಾ ಹೋಬಳಿ, ಕೃಷಿ ಅಧಿಕಾರಿ, ಶ್ರೀಮತಿ ಮಣಿಲ,ಹಾಗೂ ಗ್ರಾಮಸ್ಥರುಕಾರ್ಯಕ್ರಮದಲ್ಲಿ ಹಾಜರಿದ್ದರು.

## ವಚನ ಸಾಹಿತ್ಯ ಅತ್ಯಂತ ಶ್ರೇಷ್ಠವಾದ ಸಾಹಿತ್ಯ ವಚನಗಳನ್ನು ಬರೆದದ್ದು ಜನಪ್ರಿಯತೆಗಲ್ಲ



» **ಹೊಸದುರ್ಗ**


ವಚನ ಸಾಹಿತ್ಯ ಅತ್ಯಂತ ಶ್ರೇಷ್ಠವಾದ ಸಾಹಿತ್ಯ. ವಚನಗಳನ್ನು ಬರೆದದ್ದು ಜನಪ್ರಿಯತೆಗಲ್ಲ. ಜನಪರಕ್ಕೋಸಕ್ಕರ ಎಂದು ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಬಿ ಪಿ ಓಂಕಾರಪ್ಪ ಹೇಳಿದರು. ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಪಟ್ಟಣದ ತೋಟದ ರಾಮಯ್ಯ ಗೌರಮ್ಮ ಬಾಲಿಕಾ ಪ್ರೌಢಶಾಲೆಯಲ್ಲಿ ನಡೆದ ಫ ಗು ಹಳಕಟ್ಟಿ ಮತ್ತು ಡಾ ಕಮಲ ಹಂಪನಾ ಅವರ ಸ್ಮರಣೆಯ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಹೈಕೋರ್ಟಿನ ನಿವೃತ್ತ ನ್ಯಾಯಮೂರ್ತಿ ಬಿಲ್ಲಪ್ಪನವರು ಫ ಗು ಹಳಕಟ್ಟಿ ಮಾತನಾಡುತ್ತಾ ಬದುಕಿನ ಸಂಗತಿಗಳನ್ನು ಹೇಳಿದರು. ಹಳಕಟ್ಟಿಯವರು ಬಡತನವಿದ್ದರೂ ತಮ್ಮಮನೆಯನ್ನು ಮಾರಿ ವಚನ ಸಾಹಿತ್ಯವನ್ನು ಪ್ರಕಟಗೊಳಿಸಲು ತುಂಬಾ ಪರಿಶ್ರಮಪಟ್ಟಿದ್ದಾರೆ. ಅಂದಿನ ಅವರ ಪ್ರಯತ್ನದ ಫಲವಾಗಿ ನಾವು ಇಂದು ಸಾವಿರಾರು ವಚನಗಳನ್ನು ಓದುವಂತಾಗಿದೆ. ಶರಣರ ಜೀವನ ಗಂಧದಂತೆ ಇದ್ದು, ಕಾಯಕ ದಾಸೋಹ ಎನ್ನುವ ಅಮೂಲ್ಯ ತತ್ವವನ್ನು ಸಾರಿದ್ದಾರೆ ಎಂದು ತಿಳಿಸಿದರು. ಅಖಿಲ ಭಾರತೀಯ ವೀರಶೈವ ಲಿಂಗಾಯತ ಮಹಾಸಭಾದ ತಾಲ್ಲೂಕು ಅಧ್ಯಕ್ಷರಾದ ಮಂಜುನಾಥ ಅವರು ಡಾ ಕಮಲಾ ಹಂಪನಾ ಅವರು ಕುರಿತು ಮಾತನಾಡಿದರು. ಕಮಲಾ ಹಂಪನಾ ಅವರು ಸ್ತ್ರೀ ಸಂವೇದಿ ಲೇಖಕಿಯಾಗಿ ಗುರುತಿಸಿಕೊಂಡವರು. ಅವರು ನಿಧನದ ನಂತರವೂ ಅವರು ನೇತ್ರದಾನ ಮಾಡುವ ಮೂಲಕ ಆದರ್ಶರಾಗಿದ್ದಾರೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ವಚನಗೀತೆ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಾದ ರುಷ್ಮಿತ ಕುವರ್, ರಕ್ಷಿತ ಎಸ್, ರಕ್ಷಿತ ಎಲ್, ಸಾನಿಕಾ, ಪ್ರಾರ್ಥನ ಇವರಿಗೆ ತಾಲ್ಲೂಕಿನ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಬಹುಮಾನ ನೀಡಲಾಯಿತು.


# ಶಕುನಿ

## ಪಾತ್ರಕ್ಕೆ ಜೀವ ತುಂಬಿದ ಕಲಾವಿದ, ಉದ್ಯಮಿ ಎಂ.ನಾಗರಾಜು











» ವಿಶೇಷ ಲೇಖನ:
ಚಳ್ಳಕೆರೆ ವೀರೇಶ್

ಮಹಾಭಾರತದ ಕುರುಕ್ಷೇತ್ರದ ಕಶುನಿ ಪಾತ್ರ ಮುಖ್ಯ ಭೂಮಿಕೆಯಲ್ಲಿ ಕಾಣಸಿಗುತ್ತದೆ. ಆಧುನಿಕತೆಯಲ್ಲೂ ಕುರುಕ್ಷೇತ್ರ ನಾಟಕದ ಶಕುನಿ ಪಾತ್ರಕ್ಕೆ ಜೀವ ತುಂಬುವ ಕಲಾವಿದರು ಎಷ್ಟೋ. ಅಂತಹ ಕಲಾವಿದರಲ್ಲಿ ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನ ಚನ್ನಮ್ಮನಾಗತಿಹಳ್ಳಿ ಗ್ರಾಮದ ಕಲಾವಿದ, ಉದ್ಯಮಿ ಎಂ.ನಾಗರಾಜು ಸಹ ಒಬ್ಬರು.

ಇವರು ನಾಟಕದಲ್ಲಿ ಶಕುನಿಪಾತ್ರದಲ್ಲಿ ನಾಗರಾಜು ಸೆಟ್‌ಗೆ ಬಂದ್ರೆ ಶಿಳ್ಳೆ, ಚಪ್ಪಾಳೆಯೋ ಚಪ್ಪಾಳೆ, ಶಕುನಿ ಪಾತ್ರದಲ್ಲಿ ಬಣ್ಣ ಹಂಚಿದ್ದಾರೆ ಎಂದರೆ ಎಲ್ಲಿಲ್ಲದ ನಾಟಕಾಭಿಮಾನಿಗಳು ಸಂಜೆಗೆ ಬಂದು ವೇದಿಕೆ ಮುಂದೆ ಚಾಪೆ ಹಾಸಿ ಜಾಗವನ್ನು ಕಾಯ್ದಿರಿಸುತ್ತಾರೆ. ತನಗೆ ನೀಡಿದ ಶಕುನಿ ಪಾತ್ರಕ್ಕೆ ಕಿಂಚಿತ್ತು ಲೋಪವಾಗದಂತೆ ನೋಡುಗರ ಮನದಾಳಕ್ಕೆ ಇಳಿಯುವ ಇವರ ಅಭಿನಯ ನೋಡುಗರ ಹುಬ್ಬೇರಿಸುವಂತೆ ಮಾಡುತ್ತದೆ. ಗ್ರಾಮೀಣ ಭಾಗದ ಸಾಮಾನ್ಯ ರೈತ ಕುಟುಂಬದಲ್ಲಿ ಜನಿಸಿದ ಎಂ.ನಾಗರಾಜು ಚಿಕ್ಕ ವಯಸ್ಸಿನಿಂದಲೇ ಕಲೆಯ ಆರಾಧಕರು. ತಾಲ್ಲೂಕಿನ ಯಾವುದೇ ಗ್ರಾಮದಲ್ಲಿ ಕುರುಕ್ಷೇತ್ರ ನಾಟಕ ನಡೆದರೂ ಮೊದಲು ಸಾಲಿಗೆ ಹಾಜರಾಗುತ್ತಿದ್ದ ಇವರಿಗೆ ಕಲೆ ಎಂದರೆ ಪಂಚಪ್ರಾಣ. ಓದುವ ಕ್ಷಣದಲ್ಲೇ ಶಾಲಾ, ಕಾಲೇಜಿನಲ್ಲಿ ಸಾಮಾಜಿಕ, ಕುರುಕ್ಷೇತ್ರ ನಾಟಕಗಳಲ್ಲಿ ಅಭಿನಯಿಸುತ್ತಿದ್ದ ಇವರ ಆಸಕ್ತಿ ಇಂದು ಪ್ರತಿನಾಟಕದಲ್ಲಿ ನಾಗರಾಜು ಇಲ್ಲ ಎಂದರೆ ನಾಟಕವೇ ಇಲ್ಲ ಎನ್ನುವಷ್ಟು ಬೆಳೆಸಿದೆ. ಇದಲ್ಲದೆ ಮನೆಯಲ್ಲೂ ಸಹ ಹಲವಾರು ನಾಟಕದ ಡೈಲಾಗ್‌ಗಳನ್ನು ಪ್ರಸ್ತಾಪಿಸುತ್ತಿದ್ದ ಇವರ ಆಸಕ್ತಿ ಕಲಾವಿದನಾಗುವ ಮಹಾದಾಸೆಯನ್ನ ಕಟ್ಟಿಕೊಂಡಿದ್ದರು. ಆದರೆ, ಕಲಾದೇವತೆ ಸಂಪೂರ್ಣ ಒಲಿಯದಿದ್ದರೂ ಹಾಗಾಗೆ ಕಲಾ ಸೇವೆ ಮಾಡುವ ಅಕಾಶವನ್ನು ಮಾಡಿಕೊಟ್ಟಿದ್ದಾಳೆ.

ಶಕುನಿ ಹಿಂದೂ ಮಹಾಕಾವ್ಯವಾದ ಮಹಾಭಾರತ ಬುದ್ಧಿವಂತ, ಕುತಂತ್ರಿ ಮತ್ತು ಮೋಸಗಾರ ಎಂದು ಚಿತ್ರಿಸಲ್ಪಟ್ಟ ಶಕುನಿಯು ತನ್ನ ಸೋದರಳಿಯರನ್ನು ಅದರಲ್ಲೂ ವಿಶೇಷವಾಗಿ ಹಿರಿಯವನಾದ ದುರ್ಯೋಧನನನ್ನು ಅವರ ಸೋದರಸಂಬಂಧಿಗಳಾದ ಪಾಂಡವರ ವಿರುದ್ಧ ಸಂಚು ರೂಪಿಸುವಲ್ಲಿ ಬೆಂಬಲಿಸಿದನು. ಮಹಾಕಾವ್ಯದ ಪ್ರಮುಖ ಘಟನೆಗಳಲ್ಲಿ ಒಂದಾದ ಯುಧಿಷ್ಠಿರನ ವಿರುದ್ಧ ಪಗಡೆಯ ಆಟವನ್ನು ಆಡಿದವನು ಶಕುನಿ. ಇಂತಹ ಹಲವಾರು ವಿಷಯಗಳಿಗೆ ಜೀವಂತಿಕೆ ನೀಡುವ ಶಕ್ತಿ ಕಲಾವಿದ ನಾಗರಾಜರವರದ್ದು. ಅವರು ವೇದಿಕೇರಿ ಬಂದರೆ ನೆರೆದಿದ್ದ ಅಭಿಮಾನಿಗಳು ಅವರ ಡೈಲಾಗ್ ಗಳಿಗೆ ಎರಡು ಕಣ್ಣು, ಕಿವಿ ಅಗಲಿಸಿ ಕೇಳುವಷ್ಟು ಮಂದಸ್ಮಿತರಾಗುತ್ತಾರೆ. ಆಧುನಿಕ ಶಕುನಿ ಅಂತಲೇ ಕರೆಸಿಕೊಳ್ಳುವ ಅವರ ಪಾತ್ರ ಜನಮೆಚ್ಚಿದ್ದು. ಮಹಾಭಾರತ ಮಹಾಕಾವ್ಯದಲ್ಲಿ ಉಲ್ಲೇಖವಾದ ಆ ಶಕುನಿ ಪಾತ್ರಕ್ಕೆ ಇಂಬು ನೀಡುವಂತೆ ಕಲಾವಿದ ನಾಗರಾಜು ಸ್ಪಷ್ಟ ಘಟನಾವಳಿಗಳಿಗೆ ತಕ್ಕಂತೆ ಪಾತ್ರದಮೂಲಕ ಮಾತುಗಳನ್ನು ಘಟನೆಗೆ ಹೊಂದಿಸುವ ಅವರ ಪಾತ್ರಕ್ಕೆ ನೋಡುಗರು ಮೂಕವಿಸ್ಮಿತರಾಗುತ್ತಾರೆ.

ಇಂದು ಮಹಾಭಾರತದ ಕುರುಕ್ಷೇತ್ರ ನಾಟಕದ ಪಾತ್ರಧಾರಿ ನಾಗರಾಜು ತನ್ನ ಡೈಲಾಗ್ ದಾಳಗಳನ್ನು ಬಳಸಿ ನಾಟಕವನ್ನು ಕುಶಲತೆಯಿಂದ ನಿರ್ವಹಿಸುವಲ್ಲಿ ನಿಪುಣ. ಚಿಕ್ಕಂದಿನಿಂದಲು ನಾಟಕಗಳ ಮೇಲೆ ಅತಿವಾ ಆಸಕ್ತಿ ಹೊಂದಿದ್ದ ಕಲಾವಿದ ನಾಗರಾಜು ಗ್ರಾಮದಲ್ಲಿ ನಡೆಯುತ್ತಿದ್ದ ಕುರುಕ್ಷೇತ್ರ, ಸಾಮಾಜಿಕ ನಾಟಕಗಳು ಎಲೇ ನಡೆದರೂ ಅಲ್ಲಿ ಹಾಜರಾಗುತ್ತಿದ್ದರು.

ಹಲವಾರ ಬಾರಿ ಕಲಾವಿದ ನಾಗರಾಜರವರ ಆಸಕ್ತಿಯನ್ನು ಗಮನಿಸಿದ ಚಲನಚಿತ್ರ ಖಳನಾಯಕ ವಜ್ರಮುನಿಯವರ ಸಂಬಂಧಿ ರಂಗಶ್ರೀರಂಗಸ್ವಾಮಿ ಇವರು ಗುರುತಿಸಿ ರಂಗಕಲೆಯಲ್ಲಿ ಇವರ ಆಸಕ್ತಿಗೆ ತಕ್ಕಂತೆ ಪ್ರೋತ್ಸಾಹ ನೀಡಲು ಮುಂದಾದರು. ಅವರದ್ದೇ ರಂಸಜ್ಜಿಕೆಯಲ್ಲಿ ಒಮ್ಮೆ ಕುರುಕ್ಷೇತ್ರ ನಾಟಕ ಪ್ರದರ್ಶನ ವೇಳೆ ಕಲಾವಿದ ನಾಗರಾಜುಗೂ ಒಂದು ಅವಕಾಶ ನೀಡಿದರು. ಅಂದು ಅದ್ಭುತವಾಗಿ ನಟನೆ ಮಾಡಿ ಕಲಾಸಕ್ತರನ್ನು ರಂಜಿಸಿದರು. ಇದನ್ನು ಗಮನಿಸಿದ ಕಲಾವಿದ ರಂಗಶ್ರೀ ರಂಗಸ್ವಾಮಿ ಅವರ ಪ್ರತಿನಾಟಕದಲ್ಲೂ ಅವಕಾಶಗಳನ್ನು ನೀಡುತ್ತಾ ಬಂದರು. ಹೆಚ್ಚು ಆಸಕ್ತಿಯನ್ನು ಹೊಂದಿದ್ದ ನಾಗರಾಜು ಮತ್ತಷ್ಟು ಕಲೆಯನ್ನು ಕರಗತ ಮಾಡಿಕೊಂಡರು. ಎಲ್ಲೇ ನಾಟಕಗಳು ನಡೆದರೂ ಅಲ್ಲಿ ಹಾಜರಾಗಿ ನಾಟಕದಲ್ಲಿ ಪಾತ್ರ ಮಾಡುತ್ತಿದ್ದರು.

ಚಿತ್ರದುರ್ಗ, ಬೆಂಗಳೂರು, ತುಮಕೂರು ಸೇರಿದಂತೆ ರಾಜ್ಯದ ನಾನಾ ಭಾಗಗಳಲ್ಲಿ ತಮ್ಮ ಶಕುನಿಪಾತ್ರದಿಂದ ಎಲ್ಲರನ್ನೂ ರಂಜಿಸುತ್ತಿದ್ದಾರೆ. ನಾಟಕಗಳಲ್ಲಿ ಶಕುನಿ, ದುರ್ಯೋಧನನ ಪಾತ್ರದಲ್ಲಿ ಸಜ್ಜಿಕೆಗೆ ಎಂಟ್ರಿಕೊಡುತ್ತಲೇ ಎಲ್ಲಾ ಪ್ರೇಕ್ಷರನ್ನು ವಿಸ್ಮಿತರಾಗಿ ನೋಡುತ್ತಾರೆ. ಅವರ ಶಕುನಿ ಪಾತ್ರಕ್ಕೆ ಮನಸೋಲದವರೇ ಇಲ್ಲ ಎಂದರೆ ತಪ್ಪಿಲ್ಲ. ಈವರೆಗೂ ಸುಮಾರು 104ಕ್ಕೂ ಹೆಚ್ಚು ನಾಟಕಗಳನ್ನು ಪ್ರದರ್ಶನ ನೀಡಿದ ನಾಗರಾಜು ದಯಾಸಾಗರಪ್ರಶಸ್ತಿಯೂ ಸೇರಿದಂತೆ ತಾಲ್ಲೂಕು, ಜಿಲ್ಲಾ ಮಟ್ಟದಲ್ಲಿ ಹಲವಾರು ಸನ್ಮಾನಗಳಿಗೂ ಪಾತ್ರರಾಗಿದ್ದಾರೆ. ಕಲಾವಿದರ ನಾಗರಾಜರವರು ಚಿಕ್ಕವಯಸ್ಸಿನಿಂದಲೇ ಕಲೆಯ ಬಗ್ಗೆ ಆಸಕ್ತಿ ಹೊಂದಿದ್ದ ಅವರು, ಕಲಾರಂಗದಲ್ಲಿ ಮತ್ತಷ್ಟು ಗಟ್ಟಿಯಾಗಿ ಉಳಿಯಲು ಸಾಧ್ಯವಾಯಿತು.

ಕುರುಕ್ಷೇತ್ರ ನಾಟಕದ ಶಕುನಿ ಪಾತ್ರದಲ್ಲಿ ನಾಗರಾಜು ಕಾಣಿಸಿಕೊಳ್ಳುತ್ತಾರೆ ಎಂದರೆ ಎಲ್ಲಿಲ್ಲದ ಸಂತಸ ನಾಟಕ ಅಭಿಮಾನಿಗಳಲ್ಲಿ ಅದರಲ್ಲೂ ಚಿತ್ರದುರ್ಗ, ಚಳ್ಳಕೆರೆ ತಾಲ್ಲೂಕಿನ ಹಲವಾರು ಗ್ರಾಮಗಳಲ್ಲಿ ಸುಮಾರು ನಾಟಕಗಳನ್ನು ಪ್ರದರ್ಶಿಸಿರುವ ಇವರು ಶಕುನಿ ಎಂತಲೆ ಮನೆಯ ಮಾತಾಗಿದ್ದಾರೆ. ನೂರಾರು ನಾಟಗಳಲ್ಲಿ ಪ್ರದರ್ಶನ ನೀಡಿದರೂ ನಿರರ್ಗಳವಾಗಿ ಸಂಭಾಷಣೆಯನ್ನು ನುಡಿಯುತ್ತಾರೆ. ಚಾಚೂತಪ್ಪದೆ ನಾಟಕದ ಪ್ರತಿಯೊಂದು ಸಂಭಾಷಣೆಯನ್ನು ಉಚ್ಚಾರ ಮಾಡುವ ಇವರ ಪಾತ್ರ ನೋಡಲು ಜನರು ಮುಗಿಬಿದ್ದು ಕುಳಿತಿರುತ್ತಾರೆ. ಅವರಿಗೆ ಅವರೇ ಸಾಟಿ ಎನ್ನುವಂತೆ ಶಕುನಿ ಪಾತ್ರವನ್ನು ನಿಬಾಯಿಸುತ್ತಾರೆ. ಆಧುನಿಕ ಕಾಲದ ಶಕುನಿ ಎಂತಲೂ ಕರೆಸಿಕೊಳ್ಳುವ ಅವರ ಪಾತ್ರ ನಾಟಕ ರಂಗದಲ್ಲಿ ಅನನ್ಯವಾಗಿ ಉಳಿಯುವುದರಲ್ಲಿ ಸಂಶಯವಿಲ್ಲವಾಗಿದೆ.

ಕೇವಲ ಕಲಾರಂಗವಲ್ಲದೆ ಸಾಮಾಜಿಕ ರಂಗದಲ್ಲೂ ಇವರ ಸೇವೆ ನಡೆದಿದೆ. ಮೂಲತಃ ಗ್ರಾಮೀಣ ಭಾಗದವರಾದ ನಾಗರಾಜು ಹಲವಾರು ಕಷ್ಟಕರ್ಪಾಣ್ಯಗಳ ನಡುವೆ ಬೆಳೆದವರು. ಸಣ್ಣ ರೈತ ಕುಟುಂಬದಲ್ಲಿ ಜನಿಸಿದ ಅವರಿಗೆ ಸಮಾಜದಲ್ಲೂ ಉತ್ತಮ ಸ್ಥಾನ ಪಡೆಯಬೇಕೆಂಬ ಹಂಬಲ ಇವರದ್ದು. ಈ ಉದ್ದೇಶದಿಂದಲೇ ಉತ್ತಮ ಸಾಧನೆಗೈದು ಉದ್ಯಮಿಯೂ ಆಗಿ ಕಾರ್ಯನಿರ್ವಹಿಸುತ್ತಾರೆ. ದೊಡ್ಡವರಾಗಿ ಬೆಳೆದಾಗ ತಮ್ಮ ನಡೆದು ಬಂದ ಹಾದಿಯನ್ನು ಮರೆಯಬಾರದು ಎಂದು ತಿಂಗಳಲ್ಲಿ ಒಮ್ಮೆಯಾದರೂ ತನ್ನ ಗ್ರಾಮಕ್ಕೆ ಭೇಟಿ ನೀಡುತ್ತಾರೆ. ಅವರಿಗೆ ಕೈಲಾದ ಸಹಾಯವನ್ನು ಜನರಿಗೆ ಮಾಡುವ ಹವ್ಯಾಸವನ್ನು ಬೆಳೆಸಿಕೊಂಡಿದ್ದಾರೆ. ಗ್ರಾಮದಲ್ಲಿ ಶಾಲೆಯ ಆವರಣದಲ್ಲಿ ಸ್ವತ ವೆಚ್ಚದಲ್ಲಿ ಗಣಪತಿ ದೇವಸ್ಥಾನ ನಿರ್ಮಿಸಿದ್ದಾರೆ, ಅದರಲ್ಲದೆ ಗ್ರಾಮದ ಶಾಲೆಗೂ ಸಹ ಸಹಾಯಹಸ್ತವನ್ನು ಚಾಚಿದ ಔದಾರ್ಯ ಇವರದ್ದು ಎನ್ನುತ್ತಾರೆ ಗ್ರಾಮದ ಜನರು.

ಏನು ಮಾಡಿದರೂ ಎಂದಿಗೂ ತಮ್ಮ ಸಾಧನೆಯನ್ನು ಪ್ರಚಾರಕ್ಕೆ ಬಳಸಿಕೊಂಡವರಲ್ಲ, ಬಲಗೈನಲ್ಲಿ ಮಾಡಿದ ಎಡಗೈಗೆ ತಿಳಿಯಬಾರದು ಎಂಬ ಗಾದೆ ಮಾತಿನಂತೆ ಅವರು ಮಾಡಿದ ಕೆಲಸವನ್ನು ಎಂದಿಗೂ ಯಾರ ಬಳಿಯೂ ಹೇಳಿಕೊಳ್ಳದೆ ಎಲೆಮರೆಕಾಯಿಯಂತೆ ತಮ್ಮ ಸೇವಾಕಾರ್ಯವನ್ನು ಮುಂದುವರೆಸಿದ್ದಾರೆ. ರಂಗಕಲೆ ಮಾತ್ರವಲ್ಲದೆ, ಸಾಮಾಜಿಕ ಸೇವಾ ರಂಗದಲ್ಲೂಇವರ ಪಾತ್ರ ಅತಿವಾಎಂದರೆ ಅತಿಶೋಕ್ತಿಯಾಗಲಾರದು.

**ಪೋಟೋ: ನಾಟಕ ಚಿತ್ರಗಳು.**







Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T